
ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

19 ಮಾರ್ಚ್ 2026 ಗುರುವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 9 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629





ಯುಗಾದಿ ಹಬ್ಬದ ಹಾರ್ದಿಕ ಶುಭಾಶಯಗಳು

# ರಾಜ್ಯಸಭೆಯಲ್ಲಿ ಪ್ರೀತಿ-ವಿವಾಹ-ವಿಚ್ಛೇದನ ಚರ್ಚೆ

## ಪ್ರೇಮ್ ಹಮಾರೆ ಸಾಥ್, ಶಾದಿ ಮೋದಿಜಿ ಕೆ ಸಾಥ್-ಖರ್ಗೆ | ಕಾಂಗ್ರೆಸ್ ಜೊತೆಗೆ ಬಲವಂತದ ಪ್ರೀತಿಯಾಗಿತ್ತು-ದೇವೇಗೌಡ

• ಪ್ರಜೋದಯ ವರದಿ

**ಬೆಂಗಳೂರು:** ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಕಾಂಗ್ರೆಸ್ ಜೊತೆ ಪ್ರೀತಿಯಲ್ಲಿದ್ದರು, ಕೊನೆಗೆ ಮೋದಿ (ಬಿಜೆಪಿ) ಅವರ ಜೊತೆ ಮದುವೆಯಾದರೆಂದು ರಾಜ್ಯಸಭೆ ಹಿರಿಯ ಸದಸ್ಯ ಮಲ್ಲಿಕಾರ್ಜುನ ಖರ್ಗೆ ಅವರು ಹೇಳಿದ್ದು, ಅದಕ್ಕೆ ದೇವೇಗೌಡರು ವ್ಯಂಗ್ಯಭರಿತ ತಿರುಗೇಟು ನೀಡಿದ್ದಾರೆ.

ಸಂಸತ್ ಕಲಾಪದಲ್ಲಿ ಬುಧವಾರ ರಾಜ್ಯಸಭೆಯಿಂದ ನಿರ್ಗಮಿತರಾದ 59 ಸದಸ್ಯರಿಗೆ ಅಭಿನಂದನೆ ಸಲ್ಲಿಸುವ ವೇಳೆ ಸ್ವಾರಸ್ಯಕರ ಚರ್ಚೆಗಳು ಮುನ್ನೆಲೆಗೆ ಬಂದವು. ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಗೆ ಪತ್ರದ ಮೂಲಕ ಪ್ರತಿಕ್ರಿಯಿಸಿರುವ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು, ಕಾಂಗ್ರೆಸ್ ಜೊತೆಗಿನದ್ದು ಪ್ರೀತಿಯಲ್ಲ, ಅದು ಒಂದು ಬಲವಂತದ ಮದುವೆಯಾಗಿತ್ತು. ಆ ಸಂಬಂಧದಲ್ಲಿ ಕಿರುಕುಳ ಮತ್ತು ಹಿಂಸೆ ಇದ್ದ ಕಾರಣ ನಾನು ಅವರಿಗೆ ವಿಚ್ಛೇದನ ನೀಡಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿಕೆಗೆ ಅವರದೇ ದಾಟಿಯಲ್ಲಿ ಪ್ರತಿಕ್ರಿಯಿಸಿದ್ದಾರೆ.

> ರಾಜಕೀಯದಲ್ಲಿ ಪೂರ್ಣ ವಿರಾಮ ಅಥವಾ ನಿವೃತ್ತಿ ಎಂಬುದೇ ಇಲ್ಲ. ಭವಿಷ್ಯವು ನಿಮಗಾಗಿ ಕಾಯುತ್ತಿದೆ. ನಿಮ್ಮ ಅನುಭವವು ರಾಷ್ಟ್ರೀಯ ಜೀವನದ ಶಾಶ್ವತ ಭಾಗವಾಗಿ ಉಳಿಯುತ್ತದೆ.
> -ನರೇಂದ್ರ ಮೋದಿ, ಪ್ರಧಾನಿ

2018ರ ರಾಜಕೀಯ ವಿದ್ಯಮಾನಗಳನ್ನು ನೆನಪಿಸಿಕೊಂಡಿರುವ ಗೌಡರು, 2018ರಲ್ಲಿ ಗುಲಾಂ ನಬಿ ಆಜಾದ್ ಅವರು ಬಂದು ಕುಮಾರಸ್ವಾಮಿ ಅವರಿಗೆ ಮುಖ್ಯಮಂತ್ರಿ ಸ್ಥಾನದ ಅವಕಾಶ ನೀಡಿದ್ದರು. ಆದರೆ, ನಾನು ಅದಕ್ಕೆ ಒಪ್ಪಿರಲಿಲ್ಲ. ಖರ್ಗೆ ಅವರನ್ನೇ ಮುಖ್ಯಮಂತ್ರಿ ಮಾಡಬೇಕೆಂದು ಎಲ್ಲರ ಸಮ್ಮುಖದಲ್ಲೇ ಹೇಳಿದ್ದೆ. ಆಗ ಸಿದ್ದರಾಮಯ್ಯ ಕೂಡ ಅಲ್ಲಿದ್ದರು. ಆದರೆ ಕಾಂಗ್ರೆಸ್ ನಾಯಕರು ಕುಮಾರಸ್ವಾಮಿ ಅವರೇ ಮುಖ್ಯಮಂತ್ರಿ ಆಗಬೇಕೆಂದು ಪಟ್ಟು ಹಿಡಿದರೆಂದು ಹಳೆಯ ಘಟನೆಗಳನ್ನು ಮೆಲುಕು ಹಾಕಿದ್ದಾರೆ.



### 2019ರ ವಿಶ್ವಾಸ ದ್ರೋಹ

2018ರಲ್ಲಿ ಇಷ್ಟೆಲ್ಲಾ ನಾಟಕವಾಡಿ ಮೈತ್ರಿ ಮಾಡಿಕೊಂಡ ಕಾಂಗ್ರೆಸ್, 2019ರಲ್ಲಿ ನಮ್ಮನ್ನು ಕೈಬಿಟ್ಟಿತು. ಕಾಂಗ್ರೆಸ್ ಶಾಸಕರು ಬಿಜೆಪಿಗೆ ವಲಸೆ ಹೋಗಲು ಯಾರು ಪ್ರಚೋದನೆ ನೀಡಿದರೆಂಬುದು ಜಗತ್ತಿಗೆ ತಿಳಿದಿದೆ. ಅಂದು ಶಾಸಕರನ್ನು ಎತ್ತಿ ಕಟ್ಟಿದವರ ವಿರುದ್ಧ ಕಾಂಗ್ರೆಸ್ ಕ್ರಮ ಕೈಗೊಂಡಿದ್ದರೆ ಇಂದು ನನ್ನ ಗೆಳೆಯ ಖರ್ಗೆ ಅವರು ಎಐಸಿಸಿ ಅಧ್ಯಕ್ಷರಾಗಿ ಇನ್ನೂ ಉತ್ತಮ ಸ್ಥಿತಿಯಲ್ಲಿರುತ್ತಿದ್ದರು ಎಂದು ಪರೋಕ್ಷವಾಗಿ ರಾಜ್ಯ ನಾಯಕರತ್ತ ಬೊಟ್ಟು ಮಾಡಿದ್ದಾರೆ.

### ಸ್ಥಿರ ಮೈತ್ರಿಗಾಗಿ ಬಿಜೆಪಿ ಜೊತೆ ಸಖ್ಯ

ನಾನು ಕಾಂಗ್ರೆಸ್ ಮೈತ್ರಿಯನ್ನು ಬಿಟ್ಟು ಬರಲಿಲ್ಲ. ಅವರೇ ನಮ್ಮಿಂದ ದೂರ ಹೋದರು. ನನಗೆ ಬೇರೆ ದಾರಿಯಿಲ್ಲದೆ ಸುಸ್ಥಿರ ಮೈತ್ರಿಗಾಗಿ ಕಾಂಗ್ರೆಸ್‌ಗೆ ವಿಚ್ಛೇದನ ನೀಡಿ ಹೊರಬರಬೇಕಾಯಿತು ಎಂದು ದೇವೇಗೌಡರು ತಮ್ಮ ಪತ್ರದಲ್ಲಿ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಯುಗಾದಿ ಹಬ್ಬದ ಆಚರಣೆಯಲ್ಲಿದ್ದ ಕಾರಣ ತಮಗೆ ಸಂಸತ್ತಿನಲ್ಲಿ ಉತ್ತರಿಸಲು ಸಾಧ್ಯವಾಗಲಿಲ್ಲ ಎಂದು ಮಾಜಿ ಪ್ರಧಾನಿ ಹೇಳಿದ್ದಾರೆ.

ಸಂಸತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮಾತನಾಡಿ, ದೇವೇಗೌಡ, ಮಲ್ಲಿಕಾರ್ಜುನ ಖರ್ಗೆ, ಶರದ್ ಪವಾರ್ ತಮ್ಮ ಬದುಕಿನ ಅರ್ಧಕ್ಕಿಂತ ಹೆಚ್ಚು ಸಮಯವನ್ನು ಸಂಸದೀಯ ಕೆಲಸದಲ್ಲಿ ತೊಡಗಿಸಿಕೊಂಡಿದ್ದಾರೆ. ಹೊಸದಾಗಿ ಆಯ್ಕೆಯಾದ ಸಂಸದರು ಅವರಿಂದ ಕಲಿಯಬೇಕೆಂದು ಕಿವಿಮಾತು ಹೇಳಿದರು.


### ಗೌಡರ ಜೊತೆಗಿನ ಬಾಂಧವ್ಯ ದೊಡ್ಡದು

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಬಿಜೆಪಿ ಜೊತೆಗೆ ಮೈತ್ರಿ ಮಾಡಿಕೊಂಡಿರುವುದನ್ನು ಉಲ್ಲೇಖಿಸಿದ ಮಲ್ಲಿಕಾರ್ಜುನ ಖರ್ಗೆ ಅವರು, ಪ್ರೇಮ್ ಹಮಾರೆ ಸಾಥ್, ಶಾದಿ ಮೋದಿ ಜಿ ಕೆ ಸಾಥ್ (ನಮ್ಮೊಂದಿಗೆ ಪ್ರೀತಿ ಮಾಡಿದರು, ಆದರೆ ಪ್ರಧಾನಿ ಮೋದಿ ಅವರೊಂದಿಗೆ ಮದುವೆಯಾದರು) ಎಂಬ ಹೇಳಿಕೆ ಇಡೀ ಸದನವನ್ನೇ ನಗೆಗಡಲಲ್ಲಿ ತೇಲುವಂತೆ ಮಾಡಿತು.

ದೇವೇಗೌಡ ಅವರನ್ನು ನಾನು 54 ವರ್ಷಗಳಿಂದ ಬಲ್ಲೆ. ಅವರೊಂದಿಗೆ ಬಹಳ ಕೆಲಸ ಮಾಡಿದ್ದೇನೆ. ಆದರೆ ನಂತರ ಏನಾಯಿತೆಂದು ಗೊತ್ತಿಲ್ಲ ಎಂದ ಅವರು, ರಾಜಕೀಯ ಹಾಗು ಸಾರ್ವಜನಿಕ ಬದುಕಿನಲ್ಲಿರುವವರಿಗೆ ದೇಶ ಸೇವೆ ಮಾಡುವ ಉತ್ಸಾಹ ಎಂದಿಗೂ ಕುಂದುವುದಿಲ್ಲ. ಯಾವತ್ತೂ ನಿವೃತ್ತಿ ಹೊಂದುವುದಿಲ್ಲವೆಂದರು.

# ಅನಿಲ ಪೂರೈಕೆ ನಿಯಂತ್ರಣ ಸ್ಥಿತಿಯಲ್ಲಿದೆ

## ಗೃಹಬಳಕೆ ಸಿಲಿಂಡರ್ ಪೂರೈಕೆಗೆ ಮೊದಲ ಆದ್ಯತೆ



• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ಒಟ್ಟು 6 ಲಕ್ಷಕ್ಕೂ ಹೆಚ್ಚು ಗ್ರಾಹಕರು ಗ್ಯಾಸ್ ಸಿಲಿಂಡರ್ ಬಳಸುತ್ತಿದ್ದಾರೆ. ಅದರಲ್ಲಿ 5,576 ಕಮರ್ಷಿಯಲ್ ಸಂಪರ್ಕಗಳಿವೆ. ಸದ್ಯದ ಪರಿಸ್ಥಿತಿಯಲ್ಲಿ ಪೂರೈಕೆ ಸಮರ್ಪಕವಾಗಿದ್ದು, ನಿಯಂತ್ರಿತ ಸ್ಥಿತಿಯಲ್ಲಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಹೇಳಿದರು.

ಗ್ಯಾಸ್ ಸಿಲಿಂಡರ್ ಕೊರತೆ ಆತಂಕಕ್ಕೆ ಸಂಬಂಧಿಸಿದಂತೆ ಬುಧವಾರ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ಸದ್ಯ ಜಿಲ್ಲೆಯಲ್ಲಿ ಸಿಲಿಂಡರ್ ಕೊರತೆ ಇಲ್ಲ. ಜಿಲ್ಲೆಯಾದ್ಯಂತ ಹೆಚ್‌ಪಿಸಿಎಲ್, ಬಿಪಿಸಿಎಲ್ ಮತ್ತು ಐಒಸಿಎಲ್ ಸಂಸ್ಥೆಗಳ ಮೂಲಕ 34 ಡೀಲರ್‌ಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಗ್ರಾಹಕರಿಗೆ ಸರಿಯಾದ ಸಮಯಕ್ಕೆ ಗ್ಯಾಸ್ ಬುಕಿಂಗ್ ಹಾಗು ವಿತರಣೆಯಾಗುತ್ತಿದೆ ಎಂದು ವಿವರಿಸಿದರು.

ಒಮ್ಮೆ ಸಿಲಿಂಡರ್ ಬುಕಿಂಗ್ ಮಾಡಿದ ಬಳಿಕ 25 ದಿನಗಳವರೆಗೆ ಮರು ಬುಕಿಂಗ್ ಮಾಡಲು ಅವಕಾಶ ಇರುವುದಿಲ್ಲವೆಂಬ ನಿಯಮ ಜಾರಿಯಲ್ಲಿದ್ದು, ಇದರಿಂದ ಸಮರ್ಪಕ ವಿತರಣೆ ವ್ಯವಸ್ಥೆ ಕಾಪಾಡಲಾಗುತ್ತಿದೆ. ಹೋಟೆಲ್ ಮಾಲೀಕರು ಸಹ ಮುಂದಿನ ಒಂದು ವಾರ ಗ್ಯಾಸ್ ಬಳಕೆಯನ್ನು ಮಿತಗೊಳಿಸುವುದಾಗಿ ಜಿಲ್ಲಾಡಳಿತಕ್ಕೆ ಭರವಸೆ ನೀಡಿರುವುದು ಪರಿಸ್ಥಿತಿಯನ್ನು ಇನ್ನಷ್ಟು ನಿಯಂತ್ರಣದಲ್ಲಿಡಲು ಸಹಕಾರಿಯಾಗಲಿದೆ ಎಂದರು.

ಗೃಹ ಬಳಕೆಯ ಸಿಲಿಂಡರ್ ಪೂರೈಕೆಗೆ ಮೊದಲ ಆದ್ಯತೆ ನೀಡಿ, ಈ ಸಂಬಂಧ ಈಗಾಗಲೇ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದೆ. ಯಾವುದೇ ರೀತಿಯ ತೊಂದರೆ ಉಂಟಾದಲ್ಲಿ ಗ್ರಾಹಕರು ಜಿಲ್ಲಾಡಳಿತದ ಗಮನಕ್ಕೆ ತರಬಹುದು. ಜನರು ಯಾವುದೇ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. ಗ್ರಾಹಕರು ಬಿಲ್ಲಿಂಗ್

» ಎರಡನೇ ಪುಟದಲ್ಲಿ

# ಜಿಲ್ಲಾಧಿಕಾರಿ-ತಹಶೀಲ್ದಾರ್ ವಿರುದ್ಧ ರೇವಣ್ಣ ಕೆಂಡಾಮಂಡಲ

## ಭ್ರಷ್ಟಾಚಾರ ತಡೆಯದಿದ್ದರೆ ದಾಖಲೆ ಸಮೇತ ಡಿಸಿ ಕಚೇರಿ ಎದುರು ಪ್ರತಿಭಟನೆ ಎಚ್ಚರಿಕೆ

• ಪ್ರಜೋದಯ ವರದಿ

**ಹಾಸನ:** ಕಂದಾಯ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದ್ದು, ಹಾಸನ, ಹೊಳೆನರಸೀಪುರ ತಹಶೀಲ್ದಾರ್ ಗಳು ಭೂಮಾಫಿಯಾದವರ ಜೊತೆ ಶಾಮೀಲಾಗಿದ್ದಾರೆ. ಜಿಲ್ಲಾಧಿಕಾರಿ ಇದನ್ನೆಲ್ಲಾ ಗಮನಿಸುವುದನ್ನು ಬಿಟ್ಟು, ದಿನವಿಡಿ ಸಭೆ ಮಾಡುತ್ತಾ ಕುಳಿತಿರುತ್ತಾರೆಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ಆಕ್ರೋಶ ವ್ಯಕ್ತಪಡಿಸಿದರು.

ಬುಧವಾರ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂತಹ ಜಿಲ್ಲಾಧಿಕಾರಿಯನ್ನು ನನ್ನ ಜೀವನದಲ್ಲಿ ನೋಡಿಲ್ಲ. ಆ ಸ್ಥಾನದಲ್ಲಿರಲು ಅವರು ಅನರ್ಹರು. ಜಿಲ್ಲಾಧಿಕಾರಿ, ತಹಶೀಲ್ದಾರ್‌ಗಳು ಶಾಶ್ವತವಾಗಿ ಕಾಂಗ್ರೆಸ್ ಸರ್ಕಾರ ಇರುತ್ತದೆ ಎಂದು ತಿಳಿದುಕೊಂಡಿದ್ದಾರೆ. ಬಡವರ ಕಣ್ಣೀರು ಹಾಕಿಸುತ್ತಿರುವ ಅಧಿಕಾರಿಗಳಿಗೆ ಜನರ ಶಾಪ ತಟ್ಟುತ್ತದೆ ಎಂದು ಹರಿಹಾಯ್ದರು.

ಹಾಸನ ತಹಶೀಲ್ದಾರ್ ಗೀತಾ ಅವರು ಈ ಹಿಂದೆ ತರೀಕೆರೆಯಲ್ಲಿ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಅಮಾನತುಗೊಂಡು, ಈಗ ಹಾಸನಕ್ಕೆ ಬಂದು ಮನೆಯಲ್ಲೇ ಕುಳಿತುಕೊಂಡು ಹಣ ನೀಡಿದವರಿಗೆ ಖಾತೆ ಮಾಡಿಕೊಡುತ್ತಿದ್ದಾರೆ. ಜಿಲ್ಲಾಧಿಕಾರಿ ಅಕ್ರಮಗಳ ಬಗ್ಗೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಹೀಗೆ ಮುಂದುವರಿದರೆ ದಾಖಲೆ ಸಮೇತ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಮಾಡುತ್ತೇನೆಂದು ಎಚ್ಚರಿಸಿದರು.



### ಪೌತಿ ಖಾತೆ ಮಾಡದೆ ತೊಂದರೆ

ಗಂಡ ಮರಣದ ನಂತರ ಪತ್ನಿಗೆ ಪೌತಿ ಖಾತೆ ಮಾಡಬೇಕು. ಆದರೆ, ಕಿತ್ತನಕೆರೆ ಗ್ರಾಮದ ದ್ಯಾವಮ್ಮ

» ಎರಡನೇ ಪುಟದಲ್ಲಿ

### ಹಕ್ಕುಚ್ಯುತಿ ಮಂಡನೆ ಮನವಿಗೆ ಸಮರ್ಥನೆ

ಹಾಸನ: ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ವಿರುದ್ಧ ಹಕ್ಕುಚ್ಯುತಿ ಮಂಡನೆಗೆ ಮನವಿ ಮಾಡಿರುವುದನ್ನು ಹೆಚ್.ಡಿ.ರೇವಣ್ಣ ಅವರು ಸಮರ್ಥಿಸಿಕೊಂಡರು. ಫೆ.18 ರಂದು ಹೊಳೆನರಸೀಪುರದ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ರಥೋತ್ಸವ ಸಂಬಂಧ ನಡೆದ ಸಭೆಯಲ್ಲಿ ನಿರ್ಣಯದಂತೆ ಮಾ.2 ರಂದು ರಥಕ್ಕೆ ಬಟ್ಟೆ ಅಲಂಕಾರ ಮಾಡಲಾಗಿತ್ತು. ಆ ಬಟ್ಟೆ ತೆಗೆದು ಹೂವಿನ ಅಲಂಕಾರ ಮಾಡಬೇಕೆಂದು ಜಿಲ್ಲಾಧಿಕಾರಿ ಮೌಖಿಕವಾಗಿ ಹೇಳಿದ್ದಾರೆ. ಜಿಲ್ಲಾಧಿಕಾರಿ ನಮ್ಮನ್ನು ಕರೆದು ಕೇಳಬಹುದಿತ್ತು. ಹಾಗಾದರೆ ಸಭೆಗೆ ನನ್ನನ್ನು ಏಕೆ ಅಧ್ಯಕ್ಷರನ್ನು ಮಾಡಿದ್ದಾರೆ, ತೆಗೆದು ಬಿಡಲಿ. ನನಗೆ ಜಿಲ್ಲಾಧಿಕಾರಿ ಅಗೌರವ ತೋರಿದ್ದಾರೆ, ಹಕ್ಕುಚ್ಯುತಿ ಮಂಡಿಸಲು ಮನವಿ ಮಾಡಿದ್ದೇನೆ. ನಾನು ಅವತ್ತು ಶಾಂತಿಯಿಂದ ಬರದೆ ಹೋಗಿದ್ದರೆ ಗೋಲಿಬಾರ್ ಆಗಿ ಎಷ್ಟು ಜನರಿಗೆ ತೊಂದರೆ ಆಗುತ್ತಿತ್ತೋ ಗೊತ್ತಿಲ್ಲ. ಹೊಳೆನರಸೀಪುರದ ದೊಡ್ಡಳ್ಳಿ ಗೋಲಿಬಾರ್, ಗೊರೂರಲ್ಲಿ ಗೋಲಿಬಾರ್ ಆಗಿದ್ದು ಗೊತ್ತಿಲ್ಲವೇ ಎಂದು ಪ್ರಶ್ನಿಸಿದರು.


# ಪೆನ್‌ಡ್ರೈವ್ ಹಂಚಿಕೆ : 39 ಮಂದಿ ವಿರುದ್ಧ ಚಾರ್ಜ್‌ಶೀಟ್

## ಎಸ್‌ಐಟಿಯಿಂದ 13,712 ಪುಟ ದೋಷಾರೋಪ ಪಟ್ಟಿ ಸಲ್ಲಿಕೆ

• ಪ್ರಜೋದಯ ವರದಿ

**ಹಾಸನ:** ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಸಂಬಂಧಿಸಿದ್ದು ಎನ್ನಲಾದ ಅಶ್ಲೀಲ ವಿಡಿಯೋ ಇರುವ ಪೆನ್‌ಡ್ರೈವ್ ಹಂಚಿಕೆ ಪ್ರಕರಣ ಸಂಬಂಧ ಲೋಕಸಭಾ ಚುನಾವಣೆ ವೇಳೆ ಜೆಡಿಎಸ್ ಏಜೆಂಟ್ ಆಗಿದ್ದ ವಕೀಲ ಪೂರ್ಣಚಂದ್ರ ನೀಡಿದ ದೂರಿನ ಆಧಾರದ ಮೇಲೆ ತನಿಖೆ ನಡೆಸಿದ್ದ ಎಸ್‌ಐಟಿ ದೋಷಾರೋಪ ಪಟ್ಟಿ ಸಲ್ಲಿಕೆ ಮಾಡಿದೆ. ನಗರದ ನ್ಯಾಯಾಲಯಕ್ಕೆ ಸಲ್ಲಿಸಲ್ಪಟ್ಟ ಒಟ್ಟು 13,712 ಪುಟಗಳ ಚಾರ್ಜ್‌ಶೀಟ್‌ನಲ್ಲಿ ಕೆಲವು ಮಹತ್ವದ ವಿಚಾರಗಳು ಬಹಿರಂಗಗೊಂಡಿವೆ.

ಮಾಜಿ ಆಪ್ತರೇ ತೋಡಿದ್ದ ಖೆಡ್ಡಾಗೆ ಪ್ರಜ್ವಲ್ ರೇವಣ್ಣ ಬಿದ್ದಿದ್ದಾರೆ. ಹಲವು ವರ್ಷಗಳ ಕಾಲ ಪ್ರಜ್ವಲ್ ಜೊತೆಯಲ್ಲೇ ಇದ್ದ ನವೀನ್ ಗೌಡ, ಕಾರ್ತಿಕ್, ಚೇತನ್ ಹಾಗು ಹರೀಶ್ ಮಾಜಿ ಸಂಸದನ ವಿಡಿಯೋ ವೈರಲ್ ಹಿಂದಿನ ಪ್ರಮುಖ ರೂವಾರಿಗಳು. ಪ್ರಜ್ವಲ್ ಕುರಿತು ಎಲ್ಲಾ ಮಾಹಿತಿ ಗೊತ್ತಿದ್ದ ಕಾರು ಚಾಲಕ ಕಾರ್ತಿಕ್, ಮೊಬೈಲ್‌ನಿಂದ ವಿಡಿಯೋ ಕದ್ದಿದ್ದ. ರೇವಣ್ಣ ಕುಟುಂಬದ ವ್ಯವಹಾರ ಆಡಿಟಿಂಗ್ ಕೆಲಸವನ್ನು ನವೀನ್ ಮಾಡುತ್ತಿದ್ದರೆ, ಜೆಡಿಎಸ್‌ನಲ್ಲಿಯೇ ಇದ್ದ ಚೇತನ್ ತನಗೆ ಹಾಗು ತಾಯಿಗೆ ಚುನಾವಣೆಯಲ್ಲಿ ಸಹಾಯ ಮಾಡಲಿಲ್ಲವೆಂದು ಪಕ್ಷ ತೊರೆದಿದ್ದ. ಪ್ರಜ್ವಲ್ ಜೊತೆ ಗುರುತಿಸಿಕೊಂಡಿದ್ದ ಈತ ಬೇಲೂರು ಯುವ ಜೆಡಿಎಸ್ ಅಧ್ಯಕ್ಷನೂ ಆಗಿದ್ದ. 2019ರಲ್ಲಿ ನವೀನ್ ಕಾಂಗ್ರೆಸ್ ಸೇರಿದ್ದರೆ, 2020ರಲ್ಲಿ ಚೇತನ್ ಕೂಡ ಕಾಂಗ್ರೆಸ್‌ಗೆ ಸೇರಿದ್ದ. ಈ ಇಬ್ಬರ ಜೊತೆ ಹರೀಶ್ ಕೂಡ ಪ್ರಜ್ವಲ್ ರೇವಣ್ಣ ಕಾರು ಚಾಲಕ ಕಾರ್ತಿಕ್ ಜೊತೆ ಆತ್ಮೀಯತೆ ಹೊಂದಿದ್ದರೆಂಬುದು ತನಿಖೆ ವೇಳೆ ಬಯಲಾಗಿದೆ.



ಪ್ರಜ್ವಲ್‌ಗೆ ಸಂಬಂಧಿಸಿದ ಅಶ್ಲೀಲ ವಿಡಿಯೋ ಇರುವುದಾಗಿ ದೇವರಾಜೇಗೌಡ ಸುದ್ದಿಗೋಷ್ಠಿ ನಡೆಸಿ ಆರೋಪಿಸಿದ ಬಳಿಕ ಚೇತನ್, ನವೀನ್ ಹಾಗು ಹರೀಶ್ ಸೇರಿಕೊಂಡು ಕಾರ್ತಿಕ್ ಸಂಪರ್ಕ ಮಾಡಿದ್ದರು. ಆ ಬಳಿಕ ಪೆನ್‌ಡ್ರೈವ್ ಖರೀದಿಸಿ ಅದರಲ್ಲಿ ಅಶ್ಲೀಲ ವಿಡಿಯೋಗಳನ್ನು ತುಂಬಿ ಜೆಡಿಎಸ್‌ನ ಮಾಜಿ ಕಾರ್ಯಕರ್ತರೇ ಹಂಚಿಕೆ ಮಾಡಿದ್ದಾರೆಂದು ದೋಷಾರೋಪ ಪಟ್ಟಿಯಲ್ಲಿ ಉಲ್ಲೇಖಿಸಲಾಗಿದೆ.

ಪೆನ್‌ಡ್ರೈವ್ ಖರೀದಿ ಮಾಡಲು ಪ್ರಕರಣದ ಎ-2 ಕಾರ್ತಿಕ್ ಆರೋಪಿ, ಎ-23 ಆರೋಪಿ ಚಿರಂತ್‌ಗೆ 20 ಸಾವಿರ ರೂ. ಹಣ ನೀಡಿದ್ದು, ನಂತರ 13,500 ರೂ. ಕೊಟ್ಟು ನಗರದಲ್ಲಿ 70 ಪೆನ್‌ಡ್ರೈವ್ ಖರೀದಿ ಮಾಡಿದ್ದ ಎಂದು ಎಸ್‌ಐಟಿ ಸಲ್ಲಿಸಿದ ಚಾರ್ಜ್‌ಶೀಟ್‌ನಲ್ಲಿ ಎಲ್ಲಾ ಅಂಶಗಳು ಉಲ್ಲೇಖವಾಗಿವೆ.

### ಪ್ರಭಾವಿಗಳ ಆಪ್ತರಿಗೆ ರಿಲೀಫ್

ಈ ಪ್ರಕರಣದಲ್ಲಿ ಬಿಜೆಪಿ ಮಾಜಿ ಶಾಸಕ ಮತ್ತು ಕಾಂಗ್ರೆಸ್ ಸಂಸದ ಅವರ ಆಪ್ತರನ್ನು ಈ ಆರೋಪದಿಂದ ಕೈಬಿಡಲಾಗಿದೆ ಎಂಬ ದೂರುಗಳು ಕೇಳಿ ಬರುತ್ತಿವೆ. ಮಾಜಿ ಶಾಸಕರ ಆಪ್ತರಾದ ಶರತ್ ಮತ್ತು ಕಿರಣ್, ಹಾಗೆಯೇ ಸಂಸದರ ಆಪ್ತರಾಗಿರುವ ಪುಟ್ಟರಾಜು ಅವರಿಗೆ ಆರೋಪಗಳಿಂದ ಮುಕ್ತಿ ದೊರೆತಿದೆ.

ಪ್ರಾಥಮಿಕ ಆರೋಪಗಳ ಪ್ರಕಾರ, ಶರತ್, ಕಿರಣ್ ಮತ್ತು ಪುಟ್ಟರಾಜು ಅವರು ಪ್ರಜ್ವಲ್ ರೇವಣ್ಣ ಅವರ ಅಶ್ಲೀಲ ಪೆನ್‌ಡ್ರೈವ್ ವೀಡಿಯೋಗಳ ಹಂಚಿಕೆಯಲ್ಲಿ ಮತ್ತು ಅವುಗಳನ್ನು ದೊಡ್ಡ ಮಟ್ಟದಲ್ಲಿ ವೈರಲ್ ಮಾಡುವಲ್ಲಿ ಭಾಗಿಯಾಗಿದ್ದಾರೆ ಎನ್ನಲಾಗಿತ್ತು. ಆದರೆ, ತನಿಖೆಯಲ್ಲಿ ಇವರು ಯಾವುದೇ ವೈರಲ್ ಕೃತ್ಯದಲ್ಲಿ ಭಾಗಿಯಾಗಿಲ್ಲ ಎಂಬುದು ದೃಢಪಟ್ಟರೋದಾಗಿ ಎಸ್‌ಐಟಿ ಉಲ್ಲೇಖಿಸಿದೆ.

### ಚಾರ್ಜ್‌ಶೀಟ್‌ನಲ್ಲಿರುವ ಹೆಸರು

ನವೀನ್, ಪ್ರಜ್ವಲ್, ಕಾರು ಚಾಲಕನಾಗಿದ್ದ ಕಾರ್ತಿಕ್, ಚೇತನ್, ವೈ.ಎಸ್.ಚೇತನ್, ಲಿಖಿತ್‌ಗೌಡ, ದೇವರಾಜೇಗೌಡ, ಗಿರೀಶ್, ಯೋಗೇಶ್, ನಿಶಾಂತ್, ಹರೀಶ್, ಸುಮಂತ್, ಕೃಷ್ಣೇಗೌಡ, ಕಿರಣ್, ಎಂ.ಕೆ.ಶರತ್, ಡಿ.ಎನ್. ತೇಜಸ್, ಗಗನ್‌ಕುಮಾರ್, ರೇವಂತ್, ಶಿವಪ್ರಸಾದ್, ನಾಗೇಂದ್ರ ಜೈನ್, ವಸಂತ್‌ಕುಮಾರ್, ಸಮೀರ್ ಅಹ್ಮದ್, ಬಾಲಸುಬ್ರಹ್ಮಣ್ಯ, ಚಿರಂತ್, ದೇವರಾಜ್, ಜಯಸೂರ್ಯ, ಚಂದ್ರಶೇಖರ್, ಕುಮಾರ್, ದಿನೇಶ್, ನವೀನ್ ಕುಮಾರ್, ಪ್ರಶಾಂತ್, ಅನಿಲ್, ಹರ್ಷವರ್ಧನ್, ಅಕ್ಷಯ್‌ಕುಮಾರ್, ಪ್ರವೀಣ್‌ಕುಮಾರ್, ಹರೀಶ್, ಶಶಾಂಕ್, ಚೇತನ್ ಕುಮಾರ್ ಮತ್ತು ಸೋಮಶೇಖರ್ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಾಗಿದೆ.

### 70 ಪೆನ್‌ಡ್ರೈವ್ ಖರೀದಿ

ಎಸ್‌ಐಟಿ ಒಟ್ಟು 39 ಆರೋಪಿಗಳ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿದೆ. ಅಶ್ಲೀಲ ವಿಡಿಯೋ ಹಂಚಲು ಆರೋಪಿಗಳು 70 ಪೆನ್‌ಡ್ರೈವ್ ಖರೀದಿಸಿದ್ದರು. ನಗರದಲ್ಲೇ 70 ಪೆನ್‌ಡ್ರೈವ್ ಖರೀದಿ ಮಾಡಿರುವುದು ತನಿಖೆಯಿಂದ ಬಯಲಾಗಿದೆ. ಪ್ರಕರಣದಲ್ಲಿ 52 ಮಂದಿ ಹೆಸರು ಉಲ್ಲೇಖ ಮಾಡಲಾಗಿತ್ತು. ಆದರೆ, 39 ಮಂದಿ ಮೇಲೆ ಆರೋಪ ದೃಢಪಟ್ಟಿದೆ. ಈ ಸಂಬಂಧ 277 ಸಾಕ್ಷಿಗಳ ಹೇಳಿಕೆಯನ್ನು ಎಸ್‌ಐಟಿ ದಾಖಲಿಸಿದೆ. ವಿಡಿಯೋ ವೈರಲ್ ಪ್ರಕರಣದಲ್ಲಿ ಪ್ರಜ್ವಲ್ ಹೆಸರು ಕೈಬಿಟ್ಟು, ತಾಂತ್ರಿಕ ವರದಿ, ಎಫ್‌ಎಸ್‌ಎಲ್ ಸಾಕ್ಷಿಗಳ ವರದಿ ಆಧರಿಸಿ ದೋಷಾರೋಪ ಪಟ್ಟಿ ಸಲ್ಲಿಕೆ ಮಾಡಲಾಗಿದೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ: 128 ಮಕ್ಕಳು ಗೈರು

**ಹಾಸನ:** ಎಸ್‌ಎಸ್‌ಎಲ್‌ಸಿ ಮೊದಲ ಪರೀಕ್ಷೆಗೆ ಜಿಲ್ಲೆಯಲ್ಲಿ 128 ವಿದ್ಯಾರ್ಥಿಗಳು ಗೈರಾಗಿದ್ದಾರೆ. 19,715 ಪರೀಕ್ಷಾರ್ಥಿಗಳ ಪೈಕಿ 19,587 ವಿದ್ಯಾರ್ಥಿಗಳು ಹಾಜರಾದರು. ಆಲೂರಿನಲ್ಲಿ 1, ಅರಸೀಕೆರೆ 26, ಅರಕಲಗೂಡು 13, ಬೇಲೂರು 13, ಚನ್ನರಾಯಪಟ್ಟಣ 12, ಹಾಸನ 32, ಹೊಳೆನರಸೀಪುರ 24 ಹಾಗು ಸಕಲೇಶಪುರ ತಾಲ್ಲೂಕಿನಲ್ಲಿ 7 ಮಕ್ಕಳು ಗೈರಾಗಿದ್ದಾರೆ.

ಜಿಲ್ಲೆಯ 78 ಪರೀಕ್ಷಾ ಕೇಂದ್ರಗಳಲ್ಲಿ ಸುಗಮವಾಗಿ ಪರೀಕ್ಷೆ ನಡೆದಿದ್ದು ಮಾ. 23ರಂದು ವಿಜ್ಞಾನ ಪರೀಕ್ಷೆ ನಡೆಯಲಿದೆ.

# ಎಸ್‌ಐಟಿ ಅಧಿಕಾರಿಗಳ ಮೇಲೆ ತನಿಖೆ ಕೋರಿ ಹೈಕೋರ್ಟ್‌ನಲ್ಲಿ ರಿಟ್

## ತನಿಖಾ ತಂಡದ ನಡೆಯ ವಿರುದ್ಧ ದೇವರಾಜೇಗೌಡ ಆಕ್ಷೇಪ

• ಪ್ರಜೋದಯ ವರದಿ



**ಹಾಸನ:** ಅಶ್ಲೀಲ ವಿಡಿಯೋಗಳ ಪೆನ್‌ಡ್ರೈವ್ ಹಂಚಿಕೆ ಮಾಡಿದವರ ಹೆಸರು ಚಾರ್ಜ್ ಶೀಟ್‌ನಲ್ಲೇ ಇಲ್ಲ. ಹಾಗಾಗಿ ತನಿಖೆ ಮಾಡಿದ ಎಸ್‌ಐಟಿ ಅಧಿಕಾರಿಗಳ ವಿರುದ್ಧ ತನಿಖೆ ನಡೆಸುವಂತೆ ಕೋರಿ ಹೈ ಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸುವುದಾಗಿ ಬಿಜೆಪಿ ಮುಖಂಡ ದೇವರಾಜೇ ಗೌಡ ಅವರು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಮುಖ ಆರೋಪಿ ಸ್ಥಾನದಲ್ಲಿರುವ ಪ್ರೀತಮ್‌ಗೌಡ, ಡಿ.ಕೆ. ಶಿವಕುಮಾರ್, ಶ್ರೇಯಸ್ ಪಟೇಲ್, ಕ್ವಾಲಿಟಿ ಬಾರ್ ಶರತ್ ಸೇರಿ ಹಲವು ರಾಜಕಾರಣಿಗಳ ಹೆಸರಿಲ್ಲ. ಶಾಸಕ ಕೆ.ಎಂ.ಶಿವಲಿಂಗೇಗೌಡ ಬಹಿರಂಗವಾಗಿ ಹೇಳಿಕೆ ಕೊಟ್ಟರೂ ಅವರಿಗೆ ಏಕೆ ನೋಟೀಸ್ ಕೊಡಲಿಲ್ಲ. ಅಧಿಕಾರಿಗಳು ಕಾಂಗ್ರೆಸ್ ಪಕ್ಷದ ಗುಲಾಮರಾಗಿ ಕೆಲಸ ಮಾಡಿದ್ದಾರೆಂದು ಎಸ್‌ಐಟಿ ತನಿಖಾ ತಂಡದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ನನ್ನನ್ನು ಆರೋಪಿ ಸ್ಥಾನದಲ್ಲಿ ಇಡಲಾಗಿದೆ. ಈ ಪ್ರಕರಣದಲ್ಲಿ ಯಾರ್ಯಾರು ಇದ್ದಾರೆಂಬುದು ಜಗತ್ತಿಗೆ ಗೊತ್ತಿದೆ. ಡಿ.ಕೆ.ಶಿವಕುಮಾರ್ ಮೊದಲನೇ ಆರೋಪಿ ಸ್ಥಾನದಲ್ಲಿದ್ದರು. ಖಾಸಗಿ ಚಾನೆಲ್‌ಗೆ ಪೆನ್‌ಡ್ರೈವ್ ಹೇಗೆ ಹೋಯಿತು, ಎಲ್ಲಿ ಸಿದ್ಧವಾಯಿತು ಎಂದು ಯಾರು ಕೇಳಿಯೇ ಇಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು.

ತಪ್ಪಿತಸ್ಥರು ಯಾರೇ ಇದ್ದರೂ ನ್ಯಾಯಾಲಯಕ್ಕೆ ತಲೆ ಬಾಗಬೇಕು, ಶಿಕ್ಷೆ ಅನುಭವಿಸಲೇಬೇಕು. ರಾಜಕೀಯದಲ್ಲಿ ಯಾರು ಸಾಚಾಗಳಿಲ್ಲ, ಇವತ್ತು ಚಾರ್ಜ್‌ಶೀಟ್ ಸಲ್ಲಿಸಿದ್ದಾರೆ. ನನ್ನಿಂದ ಒಬ್ಬರಿಗೆ ಪೆನ್‌ಡ್ರೈವ್, ವಿಡಿಯೋ ಹೋಗಿದ್ದರೆ ಮಾಧ್ಯಮದಲ್ಲಿ ಬಿಡುಗಡೆ ಮಾಡಲಿ. ನನ್ನ ಮೊಬೈಲ್, ಕಂಪ್ಯೂಟರ್ ಎಲ್ಲಾ ತೆಗೆದುಕೊಂಡು ಹೋಗಿದ್ದು, ಅದರಲ್ಲಿ ಏನು ಬೇಕಾದರು ಸೇರಿಸಬಹುದು ಎಂದು ಆರೋಪಿಸಿದರು.

# ದೂರಿನಲ್ಲಿದ್ದವರ ಹೆಸರು ಎಸ್‌ಐಟಿ ಕೈಬಿಟ್ಟಿದೆ

## ಹೆಚ್ಚುವರಿ ಚಾರ್ಜ್‌ಶೀಟ್ ಸಲ್ಲಿಕೆಗೆ ವಕೀಲ ಪೂರ್ಣಚಂದ್ರ ಒತ್ತಾಯ

• ಪ್ರಜೋದಯ ವರದಿ

**ಹಾಸನ:** ಪೆನ್‌ಡ್ರೈವ್ ಹಂಚಿಕೆ ಸಂಬಂಧ ನಾನು ಕೊಟ್ಟ ದೂರಿನಲ್ಲಿ ಇದ್ದಂತಹ ಹೆಸರುಗಳನ್ನು ಚಾರ್ಜ್‌ಶೀಟ್‌ನಲ್ಲಿ ಎಸ್‌ಐಟಿ ತಂಡ ಕೈಬಿಟ್ಟಿದೆ. ಕಾನೂನಿನಲ್ಲಿ ಹೆಚ್ಚುವರಿ ಚಾರ್ಜ್‌ಶೀಟ್ ಸಲ್ಲಿಸಲು ಅವಕಾಶವಿರುವುದರಿಂದ ಅವರ ಹೆಸರುಗಳನ್ನು ಸೇರಿಸಬೇಕೆಂದು ಕೋರಿರುವುದಾಗಿ ವಕೀಲ ಪೂರ್ಣಚಂದ್ರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಲೋಕಸಭಾ ಚುನಾವಣೆ ವೇಳೆ ಜಾತ್ಯಾತೀತ ಜನತಾದಳದ ಅಭ್ಯರ್ಥಿ ಸೋಲಿಸಬೇಕೆಂದು ಸಂಚು ಹೂಡಿ ರಸ್ತೆ, ರಸ್ತೆಯಲ್ಲಿ ಪೆನ್‌ಡ್ರೈವ್ ಹಂಚಿ ಜಿಲ್ಲೆಗೆ ಕಳಂಕ ತಂದರು. ಆ ಕಳಂಕವನ್ನು ತೊಡೆದು ಹಾಕಬೇಕೆಂದು ಪೆನ್‌ಡ್ರೈವ್ ಹಂಚಿದವರ ವಿರುದ್ಧ ಸೆನ್ ಪೊಲೀಸ್ ಠಾಣೆಗೆ ದೂರು ನೀಡಿದ್ದೆ. ಇದೀಗ ತನಿಖೆ ಪೂರ್ಣಗೊಳಿಸಿ ಚಾರ್ಜ್ ಶೀಟ್ ಸಲ್ಲಿಸಿದೆ ಎಂದು ತಿಳಿಸಿದರು.

ಎಸ್‌ಐಟಿಯವರು ಇನ್ನಷ್ಟು ಆಳವಾಗಿ ತನಿಖೆ ನಡೆಸಿ ಅಡಿಷನಲ್ ಚಾರ್ಜ್‌ಶೀಟ್ ಸಲ್ಲಿಸಬೇಕು. ನಮ್ಮ ಹೋರಾಟಕ್ಕೆ ಜಯ ಸಿಕ್ಕಿದೆ. 39 ಆರೋಪಿಗಳಿಗೆ ಖಂಡಿತ ಶಿಕ್ಷೆ ಆಗುತ್ತದೆ. ಯಾರು ಇದರಲ್ಲಿ ಪ್ರಭಾವಿಗಳಿದ್ದಾರೆ ಅವರ ಹೆಸರು ಹೊರಬರಬೇಕು, ಯಾವುದೇ ಒತ್ತಡಕ್ಕೂ ಒಳಗಾಗಬಾರದು. ನಾನು ನ್ಯಾಯಾಲಯದಲ್ಲಿ ಸಾಕ್ಷಿ ನುಡಿಯುತ್ತೇನೆ. ಈ ಪ್ರಕರಣದಲ್ಲಿ ಯಾರ್‍ಯಾರು ಸಾಕ್ಷಿದಾರರಿದ್ದಾರೆ ಅವರಿಗೆ ಸರ್ಕಾರ ರಕ್ಷಣೆ ಕೊಡಬೇಕು ಎಂದರು.


## ಶಾಸಕ ಸ್ವರೂಪ್, ಜಿಲ್ಲಾಡಳಿತದ ಜೊತೆ ಚರ್ಚಿಸಿ ಸಮಸ್ಯೆ ಮನವರಿಕೆ

# ಸಿಲಿಂಡರ್ ಪೂರೈಕೆಗೆ ಹೋಟೆಲ್ ಮಾಲೀಕರ ಆಗ್ರಹ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ವಾಣಿಜ್ಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ಸರಬರಾಜು ಸ್ಥಗಿತಗೊಂಡಿರುವುದರಿಂದ ಹೋಟೆಲ್ ಉದ್ಯಮ ಸಂಕಷ್ಟಕ್ಕೆ ಸಿಲುಕಿದೆ. ಈ ಹಿನ್ನಲೆ ಕನಿಷ್ಠ ಶೇ.50ರಷ್ಟು ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳನ್ನು ಪೂರೈಕೆ ಮಾಡುವಂತೆ ಒತ್ತಾಯಿಸಿ ಹೋಟೆಲ್ ಮಾಲೀಕರ ಸಂಘದವರು ಶಾಸಕ ಹೆಚ್.ಪಿ.ಸ್ವರೂಪ್ ಅವರ ಮೂಲಕ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದ ಪರಿಣಾಮವಾಗಿ ಕಳೆದ ಒಂದು ವಾರದಿಂದ ವಾಣಿಜ್ಯ ಗ್ಯಾಸ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ. ಇದರಿಂದ ಹೋಟೆಲ್‌ಗಳ ದೈನಂದಿನ ಕಾರ್ಯಕ್ಕೆ ಸಂಪೂರ್ಣವಾಗಿ ಅಸ್ತವ್ಯಸ್ತಗೊಂಡಿದೆ. ಗ್ರಾಹಕರಿಗೆ ಸರಿಯಾದ ರೀತಿಯಲ್ಲಿ ಆಹಾರ ಪೂರೈಕೆ ಮಾಡಲು ಸಾಧ್ಯವಾಗುತ್ತಿಲ್ಲ. ವ್ಯಾಪಾರದಲ್ಲಿ ಭಾರೀ ಕುಸಿತ ಕಂಡುಬಂದಿದ್ದು, ಮುಂದಿನ ಒಂದು ಅಥವಾ ಎರಡು ದಿನಗಳಲ್ಲಿ ಸರಬರಾಜು ಸ್ಥಿರವಾಗದಿದ್ದರೆ ಸಂಪೂರ್ಣವಾಗಿ ಹೋಟೆಲ್‌ಗಳನ್ನು ಬಂದ್ ಮಾಡುವ ಪರಿಸ್ಥಿತಿ ಎದುರಾಗಲಿದೆ ಎಂದು ಎಚ್ಚರಿಸಿದರು.



ಜಿಲ್ಲೆಯ ಅನೇಕ ಹೋಟೆಲ್‌ಗಳು, ಕ್ಯಾಂಟೀನ್‌ಗಳು ಹಾಗು ಸಣ್ಣ ವ್ಯಾಪಾರಿಗಳು ತಮ್ಮ ದಿನನಿತ್ಯದ ಚಟುವಟಿಕೆಗಳಿಗೆ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳನ್ನೇ ಅವಲಂಬಿಸಿಕೊಂಡಿದ್ದಾರೆ. ಇಂಧನ ಕೊರತೆಯಿಂದಾಗಿ ಉದ್ಯಮದ ಮೇಲೆ ಆರ್ಥಿಕ ಒತ್ತಡ ಹೆಚ್ಚಾಗಿದ್ದು, ಕಾರ್ಮಿಕರ ಜೀವನೋಪಾಯಕ್ಕೂ ಧಕ್ಕೆಯಾಗಿದೆ. ಈ ಹಿನ್ನಲೆ ಗ್ಯಾಸ್ ಏಜೆನ್ಸಿಗಳು ಹಾಗು ತೈಲ ಕಂಪನಿಗಳೊಂದಿಗೆ ಜಿಲ್ಲಾಡಳಿತ ತಕ್ಷಣ ಮಾತುಕತೆ ನಡೆಸಿ, ಕನಿಷ್ಠ ಶೇ.50ರಷ್ಟು ವಾಣಿಜ್ಯ ಸಿಲಿಂಡರ್ ಪೂರೈಕೆ ಮಾಡುವಂತೆ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ಸಂಘದ ಅಧ್ಯಕ್ಷ ಹೆಚ್.ಎನ್.ಅಭಿನಂದನ್ ಅವರು ಮಾತನಾಡಿ, ಈಗಾಗಲೇ ಉದ್ಯಮಕ್ಕೆ ಸಾಕಷ್ಟು ಹೊಡೆತ ಬಿದ್ದಿದೆ. ಆಹಾರ ಪದಾರ್ಥಗಳಲ್ಲಿ ಶೇ.50ರಷ್ಟು ಕಡಿತ ಮಾಡಲಾಗಿದೆ. ಸಮಯ ಹಾಗು ವಿವಿಧ ಮೆನುಗಳನ್ನೂ ಕಡಿಮೆ ಮಾಡಲಾಗಿದೆ. ಆದರೂ ಸಂಕಷ್ಟ ಮುಂದುವರಿದಿದ್ದು, ತಕ್ಷಣ ಪರಿಹಾರ ಅಗತ್ಯವೆಂದು ಮನವಿ ಮಾಡಿದರು.

ಈ ವೇಳೆ ಶಾಸಕ ಹೆಚ್.ಪಿ.ಸ್ವರೂಪ್ ಅವರು ಕೂಡ ಜಿಲ್ಲಾಧಿಕಾರಿಯೊಂದಿಗೆ ಚರ್ಚಿಸಿ, ಹೋಟೆಲ್ ಮತ್ತು ಸಣ್ಣ ಉದ್ಯಮಿಗಳಿಗೆ ತೊಂದರೆ ಆಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಸಂಘದ ಗೌರವಾಧ್ಯಕ್ಷ ಎಂ.ಎಸ್.ನಾರಾಯಣ್, ಉಪಾಧ್ಯಕ್ಷ ಬಿ.ಎಸ್.ಬಸವರಾಜ್, ಗೌರವ ಕಾರ್ಯದರ್ಶಿ ಪ್ರವೀಣ್, ಜಂಟಿ ಕಾರ್ಯದರ್ಶಿ ರಾಘವೇಂದ್ರ, ಇತರರಿದ್ದರು.



# ವಿವಾಹ ಸ್ವಾತಂತ್ರ್ಯಕ್ಕೆ ಅಡ್ಡಿ ಶಿಕ್ಷಾರ್ಹ ಅಪರಾಧ

## ವಿಧಾನಸಭೆಯಲ್ಲಿ ಮರ್ಯಾದಾ ಹತ್ಯೆ ನಿಷೇಧ ಮಸೂದೆ ಮಂಡನೆ

• ಪ್ರಜೋದಯ ವರದಿ

**ಬೆಂಗಳೂರು:** ಅಂತರ್ಜಾತಿ ವಿವಾಹಕ್ಕೆ ಅಡ್ಡಿಪಡಿಸುವುದು, ಮರ್ಯಾದೆಯ ಹೆಸರಿನಲ್ಲಿ ಹತ್ಯೆ ಪ್ರಕರಣಕ್ಕೆ ಪೂರ್ಣ ವಿರಾಮ ಹಾಕುವ ನಿಟ್ಟಿನಲ್ಲಿ ಮರ್ಯಾದಾ ಹತ್ಯೆ ನಿಷೇಧ ಮಸೂದೆಯನ್ನು ವಿಧಾನ ಸಭೆಯಲ್ಲಿ ಬುಧವಾರ ಮಂಡಿಸಲಾಯಿತು. ಸಚಿವ ಪ್ರಿಯಾಂಕ್ ಖರ್ಗೆ ಅವರು ಈ ಮಹತ್ವದ ಮಸೂದೆಯನ್ನು ವಿಧಾನಸಭೆಯಲ್ಲಿ ಮಂಡನೆ ಮಾಡಿದರು.

ವಿವಾಹದಲ್ಲಿ ಆಯ್ಕೆ ಸ್ವಾತಂತ್ರ್ಯವನ್ನು ಒದಗಿಸಿ ಜಾತಿ ಆಧಾರಿತ ಅಪರಾಧಗಳನ್ನು ತಡೆಯಲು ಹಾಗೂ ನಿಷೇಧಿಸಲು ಈ ಮಸೂದೆ ಮಂಡನೆ ಮಾಡಲಾಗಿದೆ. ಜಾತಿ ಆಧಾರಿತ ಅಪರಾಧಗಳ ಮೂಲಕ ಮಾನವಹಕ್ಕು ಉಲ್ಲಂಘನೆ ತಡೆಯಲು, ಅಂತರ್ಜಾತಿ ವಿವಾಹಗಳಿಗೆ ಗೌರವ ನೀಡಲು, ವೈಯಕ್ತಿಕ ಆಯ್ಕೆಗಳ ಮೇಲೆ ಜಾತಿ ಆಧಾರಿತ ಬಲವಂತದ ಭೇದ ಭಾವವನ್ನು ತಡೆಯಲು ಮಸೂದೆಯಲ್ಲಿ ನಿಯಮಗಳನ್ನು ರೂಪಿಸಲಾಗಿದೆ. ಜೊತೆಗೆ ಅಂತರ್ಜಾತಿ ವಿವಾಹವನ್ನು ನೆರವೇರಿಸಲು ಇವ ನಮ್ಮವ.. ಇವ ನಮ್ಮವ ವೇದಿಕೆ ಸ್ಥಾಪಿಸಲು ಅವಕಾಶ ಇದೆ.

**ಅಂತರ್ಜಾತಿ ವಿವಾಹಗಳಿಗೆ ರಕ್ಷಣೆ**

ರಾಜ್ಯದಲ್ಲಿ ಜಾತಿ ಆಧಾರಿತ ಭೇದ ಭಾವ ಕ್ರೂರ ಹಿಂಸಾಚಾರದ ರೂಪದಲ್ಲಿ ವ್ಯಕ್ತವಾಗುತ್ತಿದೆ. ಅಂತರ್ಜಾತಿ ವಿವಾಹಗಳು ನಡೆದ ಸಂದರ್ಭದಲ್ಲಿ ಮರ್ಯಾದೆ ಹತ್ಯೆಗಳಂತಹ ಅಪರಾಧಗಳು ನಡೆಯುತ್ತಿವೆ. ಇಂತಹ ಘಟನೆಗಳು ನಡೆಯದಂತೆ ತಡೆಯುವ ನಿಟ್ಟಿನಲ್ಲಿ ಕಾನೂನು ಜಾರಿಗೆ ತರುವುದು ಸರ್ಕಾರದ ಉದ್ದೇಶವಾಗಿದೆ.

ಈಗಾಗಲೇ ಜಾರಿಯಲ್ಲಿರುವ ಕಾನೂನುಗಳಲ್ಲಿ ಅಪಾಯದಲ್ಲಿರುವ ಜೋಡಿಗಳಿಗೆ ಮುನ್ನೆಚ್ಚರಿಕಾ ರಕ್ಷಣಾ ವ್ಯವಸ್ಥೆಗಳು, ಕಡ್ಡಾಯ ಪೊಲೀಸ್ ಹಸ್ತಕ್ಷೇಪ, ವೇಗದ ವಿಚಾರಣೆ ಹಾಗೂ ನಾಗರಿಕ ಹಕ್ಕುಗಳ ಪುನಸ್ಥಾಪನೆಗೆ ಸಂಬಂಧಿಸಿದ ಸಮರ್ಥ ವ್ಯವಸ್ಥೆಗಳು ಇಲ್ಲವಾಗಿದೆ. ವಿಶೇಷವಾದ ಕಾನೂನು ಇಲ್ಲದ ಕಾರಣ ಅಪರಾಧಿಗಳು ಕಠಿಣ



ಶಿಕ್ಷೆಯಿಂದ ತಪ್ಪಿಸಿಕೊಳ್ಳುತ್ತಿದ್ದು, ಪೀಡಿತರು ಅಥವಾ ಬದುಕುಳಿದವರು ಸಮರ್ಪಕ ಪರಿಹಾರ ಮತ್ತು ಪುನರ್ವಸತಿಯನ್ನು ಪಡೆಯುವುದರಲ್ಲಿ ವಿಫಲರಾಗುತ್ತಿದ್ದಾರೆ. ಈ ಉದ್ದೇಶದಿಂದ ಮಸೂದೆಯ ಉದ್ದೇಶವಾಗಿದೆ.

**ಮದುವೆಯ ಸ್ವಾತಂತ್ರ್ಯ**

ಮಸೂದೆಯಲ್ಲಿ ಪ್ರತಿ ವ್ಯಕ್ತಿಗೆ ತನ್ನ ಆಯ್ಕೆಯ ವ್ಯಕ್ತಿಯ ಜೊತೆ ವಿವಾಹ ಆಗುವ ಸ್ವಾತಂತ್ರ್ಯವಿದೆ. ಕುಟುಂಬದ ಸದಸ್ಯರು, ಪೋಷಕರಿಂದ ಯಾವುದೇ ಅಡೆತಡೆ ಇಲ್ಲದೆ ವಿವಾಹವಾಗುವ ಹಕ್ಕಿದೆ. ವಯಸ್ಕ ಗಂಡು ಹಾಗೂ ಹೆಣ್ಣು ಒಪ್ಪಿ ಮದುವೆಯಾಗುವುದಾದರೆ ಅದಕ್ಕೆ ಯಾವುದೇ ವ್ಯಕ್ತಿಯ, ಪೋಷಕರ ಅಥವಾ ಕುಟುಂಬ ಸದಸ್ಯರ ಅನುಮತಿ ಬೇಕಾಗಿಲ್ಲ. ಅಷ್ಟೇ ಅಲ್ಲದೆ ಇಂತಹ ವಿವಾಹಗಳಿಗೆ ಅಡ್ಡಿ ಪಡಿಸುವುದು ಶಿಕ್ಷಾರ್ಹ ಅಪರಾಧವಾಗಲಿದೆ.

ಯಾವುದೇ ಜಾತಿಯ ಹೆಣ್ಣು ಗಂಡು ಮದುವೆಯಾಗಲು ಬಯಸಿದಲ್ಲಿ ಆ ಇಬ್ಬರು ವ್ಯಕ್ತಿಗಳು ತಮ್ಮ ವಯಸ್ಸು, ಒಪ್ಪಿಗೆಯಿರುವ ಇಚ್ಛೆ ಸಂಬಂಧ ಜಿಲ್ಲಾ ಮ್ಯಾಜಿಸ್ಟ್ರೇಟ್‌ಗೆ ಮಾಹಿತಿ ಅಥವಾ ಲಿಖಿತವಾಗಿ ಡಿಕ್ಲರೇಷನ್ ನೀಡಬೇಕಾಗಿದೆ. ಆ ಮಾಹಿತಿಯನ್ನು ಹತ್ತಿರದ ಪೊಲೀಸ್ ಠಾಣೆಗೂ ರವಾನಿಸಬೇಕು. ಇಂತಹ ಜೋಡಿಗಳ ವಿರುದ್ಧ ಪೊಲೀಸರು, ಕುಟುಂಬಸ್ಥರು, ಪೋಷಕರು, ಯಾವುದೇ ಅಧಿಕಾರಿಗಳು, ಮೂರನೇ ವ್ಯಕ್ತಿ ಕ್ರಮ ಕೈಗೊಳ್ಳಲು ಅವಕಾಶ ಇಲ್ಲ.

**ಮರ್ಯಾದಾ ಕೃತ್ಯಗಳಿಗೆ ನಿಷೇಧ**

ಜಾತಿ, ಸಂಸ್ಕೃತಿ, ಸಂಪ್ರದಾಯ, ಗೌರವದ ಹೆಸರಲ್ಲಿ ಯಾವುದೇ ವ್ಯಕ್ತಿ ಕೃತ್ಯಗಳನ್ನು ನಡೆಸುವ ಹಾಗಿಲ್ಲ. ಗೌರವ ಹತ್ಯೆಗಳಂತಹ ಅಪರಾಧಗಳು ಈ ಕಾನೂನಿನಲ್ಲಿ ನಿಷೇಧವಾಗಿದೆ. ಈ ಸಂಬಂಧ ವಿವಾಹಿತ ಅಥವಾ ಪ್ರೇಮಿಗಳಿಗೆ ಸಂಬಂಧಿಕರು, ಸ್ನೇಹಿತ ಕೊಲೆ, ದೈಹಿಕ ಹಲ್ಲೆ ಮಾಡುವುದು ಮರ್ಯಾದಾ ಅಪರಾಧ ಎಂದು ಪರಿಗಣಿಸಲಾಗುತ್ತದೆ. ಅಂತರ್ಜಾತಿ ವಿವಾಹವಾಗುವವರಿಗೆ ಅಥವಾ ವಿವಾಹಿತರಿಗೆ ಕಿರುಕುಳ ನೀಡುವುದು, ಬೆದರಿಕೆ ಒಡ್ಡುವುದು, ಬಹಿಷ್ಕಾರ ಹಾಕುವುದು ಅಪರಾಧವಾಗಲಿದೆ.

**ಅಪಹರಣ, ಸಾಮಾಜಿಕ ಬಹಿಷ್ಕಾರ ಶಿಕ್ಷಾರ್ಹ**

ಜೋಡಿಗಳನ್ನು ಅಪಹರಣ ಮಾಡುವುದು, ಸಾಮಾಜಿಕ ಹಾಗೂ ಆರ್ಥಿಕ ಬಹಿಷ್ಕಾರ ಹಾಕುವುದು ಕಾನೂನು ಪ್ರಕಾರವಾಗಿ ಅಪರಾಧವಾಗಲಿದೆ. ಅಲ್ಲದೆ, ಬಲವಂತವಾಗಿ ಜೋಡಿಗಳನ್ನು ಅವರ ಕುಟುಂಬದಿಂದ, ಸಂಬಂಧಿಕರನ್ನು ಗ್ರಾಮ, ಮನೆ, ಪ್ರದೇಶಗಳಿಂದ ತೆರವು, ಸ್ಥಳಾಂತರ ಮಾಡುವುದು ಅಪರಾಧವಾಗಿರಲಿದ್ದು, ಜೋಡಿಗಳ ಮರ್ಯಾದೆ ಹತ್ಯೆ ಮಾಡಿದರೆ ಕನಿಷ್ಠ ಐದು ವರ್ಷದ ಶಿಕ್ಷೆಗೊಳಗಾಗಲಿದ್ದಾರೆ.

# ಗೃಹೋಪಯೋಗಿ ಸಿಲಿಂಡರ್‌ಗಳು ಹೋಟೆಲ್‌ನಲ್ಲಿ!

## ಅಡುಗೆ ಸಿಲಿಂಡರ್ ಬಳಕೆ ಕಾರ್ಯಾಚರಣೆ: ದೂರು ದಾಖಲು

• ಪ್ರಜೋದಯ ವರದಿ

**ಅರಕಲಗೂಡು:** ಪಟ್ಟಣ ಸೇರಿದಂತೆ ತಾಲ್ಲೂಕಿನಾದ್ಯಂತ ನಡೆಯುತ್ತಿರುವ ಹೋಟೆಲ್, ರಸ್ತೆ ಬದಿ ಕ್ಯಾಂಟೀನ್‌ಗಳಿಗೆ ಭೇಟಿ ನೀಡಿ ಗೃಹೋಪಯೋಗಿ ಅಡುಗೆ ಸಿಲಿಂಡರ್ ಬಳಕೆ ಕುರಿತು ಕಾರ್ಯಚರಣೆ ನಡೆಸಿತು.

ರಾಮನಾಥಪುರದಲ್ಲಿರುವ ಹೊಂಗನಸು ಫ್ಯಾಮಿಲಿ ರೆಸ್ಟೋರೆಂಟ್ ಹೋಟೆಲ್‌ನಲ್ಲಿ ಮೂರು ಗೃಹಬಳಕೆ ಸಿಲಿಂಡರ್ ಬಳಕೆ ಮಾಡುತ್ತಿರುವುದನ್ನು ಪತ್ತೆ ಹಚ್ಚಿದ ತಂಡ ನಂತರ ಕೊಣನೂರು ಪೊಲೀಸ್ ಠಾಣೆಗೆ ದೂರು ದಾಖಲಿಸಿದೆ.

ಆಹಾರ ಇಲಾಖೆ ಅಧಿಕಾರಿಗಳಾದ ಮಂಜು ಎಲ್.ಬಿ ಹಾಗೂ ರೂಪ.ಎಸ್ ಅವರ ತಂಡ ಕಳೆದ ಎರಡು ದಿನಗಳಿಂದಲೂ ಕೂಡ ನಿರಂತರವಾಗಿ ಹೋಟೆಲ್, ಬೇಕರಿಗಳು, ಟೀ ಸ್ಟಾಲ್ ಮತ್ತು ಇತರೆ ವಾಣಿಜ್ಯ ಕೇಂದ್ರಗಳಿಗೆ ಭೇಟಿನೀಡಿ ಪರಿಶೀಲನೆ ಕೈಗೊಂಡಿದೆ.

ಸದ್ಯದ ಮಟ್ಟಿಗೆ ಈಗ ವಾಣಿಜ್ಯ




ಸಿಲಿಂಡರ್ ಕೊರತೆ ಇದೆ. ಕೆಲವೇ ದಿನಗಳಲ್ಲಿ ಸಮಸ್ಯೆ ನಿವಾರಣೆಯಾಗಲಿದೆ. ಆದರೆ ಮನೆ ಬಳಕೆ ಸಿಲಿಂಡರ್ ಕೊರತೆ ಇಲ್ಲ. ಗ್ಯಾಸ್ ಬುಕ್ಕಿಂಗ್ ಮಾಡಿದ 45ದಿನಗಳಲ್ಲಿ ಮನೆ ಬಾಗಿಲಿಗೆಯೇ ಸಿಲಿಂಡರ್ ಸರಬರಾಜು ಆಗಲಿದೆ. ಯಾರೂ ಕೂಡ ಗ್ಯಾಸ್ ಏಜೆನ್ಸಿ ಮುಂದೆ ಸರದಿ ಸಾಲಿನಲ್ಲಿ ನಿಲ್ಲುವ ಅವಶ್ಯಕತೆ ಇಲ್ಲ. ತಾಲ್ಲೂಕಿನ ಕೊಣನೂರು, ಕೇರಳಾಪುರ, ದೊಡ್ಡಮಗ್ಗೆ ಮತ್ತು ಅರಕಲಗೂಡಿನಲ್ಲಿ ಹೆಚ್.ಪಿ. ಭಾರತ್ ಗ್ಯಾಸ್ ಏಜೆನ್ಸಿಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿವೆ. ಅಲ್ಲದೆ ಗಡಿಭಾಗದಲ್ಲಿಯೂ ಪಕ್ಕದ ತಾಲೂಕುಗಳ ಗ್ಯಾಸ್ ಏಜೆನ್ಸಿಗಳು ಸಹ ಸಿಲಿಂಡರ್ ಸರಬರಾಜು ಮಾಡುತ್ತಿವೆ. ನಿಗದಿತ ಅವಧಿಯೊಳಗೆ ಸಿಲಿಂಡರ್ ಬುಕ್ ಮಾಡಿ ಪಡೆದುಕೊಳ್ಳಬೇಕೆಂದು ಆಹಾರ ಇಲಾಖೆ ಅಧಿಕಾರಿ ಮಂಜು ಅವರು ಮನವಿ ಮಾಡಿದ್ದಾರೆ.

ಪಟ್ಟಣವೂ ಸೇರಿದಂತೆ ತಾಲ್ಲೂಕಿನಲ್ಲಿನ ಹೋಟೆಲ್‌ಗಳು, ಬೇಕರಿಗಳು, ಮತ್ತು ಟೀ ಸ್ಟಾಲ್ ಹಾಗೂ ಇತರೆ ಮಾಲೀಕರುಗಳಿಗೆ ತಿಳಿಸುವುದೆನೆಂದರೆ, ಯಾವುದೇ ಕಾರಣಕ್ಕೂ ಗೃಹೋಪಯೋಗಿ ಅಡುಗೆ ಅನಿಲದ ಸಿಲಿಂಡರ್ ಗಳನ್ನು ವಾಣಿಜ್ಯ ಉದ್ದೇಶಕ್ಕಾಗಿ ಉಪಯೋಗಿಸದೆ, ವಾಣಿಜ್ಯ ಸಿಲಿಂಡರ್‌ಗಳನ್ನು ಉಪಯೋಗಿಸಬೇಕಾಗಿ ಮಾಲೀಕರುಗಳಿಗೆ ಈಗಾಗಲೇ ತಿಳಿಸಲಾಗಿದ್ದು, ತಪ್ಪಿದಲ್ಲಿ ಪೊಲೀಸ್ ಠಾಣೆಗಳಲ್ಲಿ ದೂರು ದಾಖಲು ಮಾಡಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

# 'ಕಚ್ಚಾ ತೈಲ' ಪ್ರತಿ ಬ್ಯಾರೆಲ್‌ಗೆ 103 ಡಾಲರ್ ಏರಿಕೆ


## ಇರಾನ್ ಎಚ್ಚರಿಕೆ ಬೆನ್ನಲ್ಲೇ ಮತ್ತಷ್ಟು ದುಬಾರಿ

• ಪ್ರಜೋದಯ ವರದಿ

**ಟೆಹರಾನ್:** ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷ 19ನೇ ದಿನಕ್ಕೆ ಕಾಲಿಟ್ಟಿದ್ದು, ಪರಿಸ್ಥಿತಿ ಶಾಂತಗೊಳ್ಳುವ ಯಾವುದೇ ಲಕ್ಷಣ ತೋರುತ್ತಿಲ್ಲ.

ಹಾರ್ಮುಜ್ ಜಲಸಂಧಿಯಲ್ಲಿನ ಪರಿಸ್ಥಿತಿಯು ಸಹಜ ಸ್ಥಿತಿಗೆ ಮರಳಲ್ಲ ಎಂದು ಇರಾನ್ ಸಂಸದೀಯ ಸ್ಪೀಕರ್ ಮೊಹಮ್ಮದ್ ಬಾಕರ್ ಖಲಿಬಾಫ್ ಹೇಳಿಕೆ ಬೆನ್ನಲ್ಲೇ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಪ್ರತಿ ಬ್ಯಾರೆಲ್ ಕಚ್ಚಾ ತೈಲ ಬೆಲೆಯು ಬುಧವಾರ 103 ಡಾಲರ್‌ಗೆ ಏರಿದೆ.

ಖಲಿಬಾಫ್ ಹೇಳಿಕೆ ಹಾರ್ಮುಜ್ ಜಲಸಂಧಿ ಮೂಲಕ ತೈಲ ಹಡಗುಗಳ ಸುರಕ್ಷಿತೆ ಮೂಲಕ ಅನಿಶ್ಚಿತತೆಯನ್ನು ಹೆಚ್ಚಿಸಿದೆ. ಹಾರ್ಮುಜ್ ಜಲಸಂಧಿ ಪರಿಸ್ಥಿತಿಯು ಅದರ ಯುದ್ಧ-ಪೂರ್ವ ಸ್ಥಿತಿಗೆ ಮರಳುವುದಿಲ್ಲ ಎಂದು




ಖಲಿಬಾಫ್ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ಇರಾನ್ ವಿರುದ್ಧ ಅಮೆರಿಕ ಮತ್ತು ಇಸ್ರೇಲ್ ನಡೆಸುತ್ತಿರುವ ಜಂಟಿ ವೈಮಾನಿಕ ದಾಳಿಯಿಂದ ಈ ಪ್ರದೇಶದಲ್ಲಿ ಉದ್ವಿಗ್ನತೆ ಹೆಚ್ಚುತ್ತಿರುವ ನಡುವೆ ಖಲಿಬಾಫ್ ನೀಡಿರುವ ಹೇಳಿಕೆ ಇಂಧನ ಪೂರೈಕೆ ಸ್ಥಿರತೆ ಬಗ್ಗೆ ಮತ್ತಷ್ಟು ಕಳವಳವನ್ನುಂಟು ಮಾಡಿದೆ.

ಬುಧವಾರದ ವಹಿವಾಟಿನ ವೇಳೆ ಕಚ್ಚಾ ತೈಲ ಬೆಲೆಯು ಪ್ರತಿ ಬ್ಯಾರೆಲ್‌ಗೆ 103. 45 ಡಾಲರ್ ತಲುಪಿಸಿದೆ. ಇದು ಜಾಗತಿಕ ಮಾರುಕಟ್ಟೆಗಳಲ್ಲಿ ನಿರಂತರ ಒತ್ತಡವನ್ನು ಪ್ರತಿಬಿಂಬಿಸುತ್ತದೆ. ಸದ್ಯ ನಡೆಯುತ್ತಿರುವ ಸಂಘರ್ಷ ದಿಂದಾಗಿ ಕೇವಲ 18 ದಿನಗಳಲ್ಲಿ ತೈಲ ಬೆಲೆಗಳು ಶೇ.40 ಕ್ಕಿಂತ ಹೆಚ್ಚು ಏರಿಕೆಯಾಗಿದ್ದು, ಇದು ಹಾರ್ಮುಜ್ ಜಲಸಂಧಿಯ ಮೂಲಕ ಇಂಧನ ಪೂರೈಕೆಗೆ ಅಡ್ಡಿಪಡಿಸಿದೆ. ಜಾಗತಿಕ ಇಂಧನ ಮಾರುಕಟ್ಟೆಗಳ ಮೇಲೆ ವಿಶೇಷವಾಗಿ ಏಷ್ಯಾದಲ್ಲಿ ಗಮನಾರ್ಹವಾಗಿ ಪ್ರಭಾವ ಬೀರಿದೆ.

ಯುದ್ಧದ ಆರಂಭದ ಮೊದಲು ಫೆಬ್ರವರಿ 27 ರಂದು ಅಂತರರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ಕಚ್ಚಾ ತೈಲ ಬೆಲೆಗಳು ಪ್ರತಿ ಬ್ಯಾರೆಲ್‌ಗೆ 73 ರಷ್ಟಿತ್ತು. ಈಗ ಅದು ಪ್ರತಿ ಬ್ಯಾರೆಲ್‌ಗೆ 103 ಡಾಲರ್‌ಗೆ ಏರಿಕೆ ಆಗಿದೆ.

# ನೌಕರರ ಸಮಸ್ಯೆಗಳಿಗೆ ಸಂಘದ ಪರಿಶ್ರಮ ಅನನ್ಯ

• ಪ್ರಜೋದಯ ವರದಿ

**ಆಲೂರು:** ಸರ್ಕಾರಿ ನೌಕರರ ಸಾಧಕ-ಬಾಧಕಗಳನ್ನು ಅವಲೋಕಿಸಿ, ಅವರಿಗೆ ಶಕ್ತಿ ಕೇಂದ್ರವಾಗಿರುವುದು ರಾಜ್ಯ ಸರ್ಕಾರಿ ನೌಕರರ ಸಂಘ. ನೌಕರರ ಸಮಸ್ಯೆಗಳಿಗೆ ಸ್ಪಂದಿಸುತ್ತಾ ಆಯಾ ಸರ್ಕಾರದೊಂದಿಗೆ ಸಂವಾದಿಸುತ್ತಾ ನೌಕರರ ಬೇಡಿಕೆಗಳನ್ನು ಈಡೇರಿಸುವಲ್ಲಿ ಸಂಘದ ಪರಿಶ್ರಮ ಅನನ್ಯವಾದುದು ಎಂದು ಶಾಸಕ ಸಿಮೆಂಟ್ ಮಂಜುನಾಥ್ ಅವರು ಅಭಿಪ್ರಾಯಪಟ್ಟರು.

ತಾಲ್ಲೂಕು ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿದ್ದ 2025-26 ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಆಲೂರು ತಾಲ್ಲೂಕು ರಾಜ್ಯ ಸರ್ಕಾರಿ ನೌಕರರ ಸಂಘದ




ಕಟ್ಟಡದ ಮುಂದುವರಿದ ಅಭಿವೃದ್ಧಿ ಕಾಮಗಾರಿಯ ಶಂಕುಸ್ಥಾಪನೆ ಮಾಡಿ ಮಾತನಾಡಿದ ಅವರು, ರಾಜ್ಯ ಸರಕಾರಿ ನೌಕರರು ನಮ್ಮ ತಾಲ್ಲೂಕಿನಲ್ಲಿ ಸುಮಾರು ಸಾವಿರಕ್ಕೂ ಅಧಿಕವಿದ್ದು, ಈಗಿರುವ ಕಟ್ಟಡ ಚಿಕ್ಕದಾಗುವುದರಿಂದ ದೊಡ್ಡ ಸಮುದಾಯ ಭವನ ನಿರ್ಮಿಸಲು ವಿಶಾಲವಾದ ನಿವೇಶನ ಅಗತ್ಯವಿದೆ ಎಂದು ತಾಲ್ಲೂಕು ಅಧ್ಯಕ್ಷ ಡಿ.ಎಂ.ವರದರಾಜುರವರ ಕೋರಿಕೆ ಮೇರೆಗೆ ಸದ್ಯದಲ್ಲೇ ಪಟ್ಟಣದ ವ್ಯಾಪ್ತಿಯಲ್ಲಿ ಸೂಕ್ತ ನಿವೇಶನ ಒದಗಿಸಲಾಗುವುದು ಎಂದು ಭರವಸೆ ನೀಡಿದರು. ವಿವಿಧ ಇಲಾಖಾ ನೌಕರರ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿರುವ ನೌಕರರ ಸಂಘದ ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸಲಾಗುವುದು ಎಂದರು.

ಸರ್ಕಾರಿ ನೌಕರರ ಜಿಲ್ಲಾ ಸಂಘದ ಅಧ್ಯಕ್ಷ ಬಾಗೂರು ಕೃಷ್ಣೇಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಾ. ಲಕ್ಷ್ಮೀಕಾಂತ್, ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಎ.ಜೆ.ಕೃಷ್ಣೇಗೌಡ, ತಾಲ್ಲೂಕು ಸಮನ್ವಯಾಧಿಕಾರಿ ವಿಜಯ ಕುಮಾರ್, ತಾಲ್ಲೂಕು ರಾಜ್ಯ ಸರಕಾರಿ ನೌಕರರ ಸಂಘದ ಅಧ್ಯಕ್ಷ ಡಿ.ಎಂ. ವರದರಾಜು, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಸಿ.ಎಚ್.ರಾಮಚಂದ್ರು, ತಾಲ್ಲೂಕು ಗೌರವಾಧ್ಯಕ್ಷ ಬಿ.ಆರ್.ಧರ್ಮ, ಖಜಾಂಚಿ ಡಾ. ಅನಿಲ್ ಕುಮಾರ್, ಕಾರ್ಯದರ್ಶಿ ಹೇಮಂತ್, ಮಾಜಿ ಅಧ್ಯಕ್ಷ ನಯನ, ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಬಿ.ಅಮೃತೇಶ್, ಎಂ.ಆರ್.ಶ್ರೀನಿವಾಸ, ಎಂ.ಆರ್. ವೇಣುಗೋಪಾಲ, ಹಾಜಿರಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಖಜಾನೆಯಿಂದ ದೇಗುಲಕ್ಕೆ ಶ್ರೀ ಚನ್ನಕೇಶವ ಸ್ವಾಮಿ ಆಭರಣ

• ಪ್ರಜೋದಯ ವರದಿ

**ಬೇಲೂರು:** 1117ರಲ್ಲಿ ನಿರ್ಮಾಣವಾದ ಈ ಹೊಯ್ಸಳ ದೇಗುಲವು, 909 ವರ್ಷಗಳ ಇತಿಹಾಸ ಮತ್ತು ಕಲಾತ್ಮಕ ಶಿಲ್ಪಗಳಿಗೆ ಹೆಸರುವಾಸಿಯಾಗಿದ್ದು, ಜಗತ್ಪ್ರಸಿದ್ಧ ಶ್ರೀ ಚನ್ನಕೇಶವ ದೇವಾಲಯದಲ್ಲಿ ಪ್ರತಿ ವರ್ಷದಂತೆ ರಥೋತ್ಸವದ ಸಂದರ್ಭದಲ್ಲಿ ತಹಶೀಲ್ದಾರ್ ಕಚೇರಿಯ ಖಜಾನೆಯಿಂದ ವಿಶೇಷ ಪೂಜೆಯೊಂದಿಗೆ ಚಿನ್ನಾಭರಣಗಳನ್ನು ಪಲ್ಲಕ್ಕಿಯಲ್ಲಿ ತಂದು, ಕಟ್ಟುನಿಟ್ಟಿನ ಸಂಪ್ರದಾಯದಂತೆ ದೇವರಿಗೆ ಯುಗಾದಿ ಹಬ್ಬದಂದು ಅಲಂಕರಿಸಲಾಗುತ್ತದೆ.

ಐತಿಹಾಸಿಕ ಬೇಲೂರು ಶ್ರೀ ಚನ್ನಕೇಶವ ಸ್ವಾಮಿ ಜಾತ್ರೆ ಮತ್ತು ರಥೋತ್ಸವಕಕ್ಕೆ ದಿನಗಣನೆ ಆರಂಭವಾಗಿದೆ. ಶ್ರೀ ಚನ್ನಕೇಶವ ಸ್ವಾಮಿ ರಥೋತ್ಸವ ಹಾಗೂ ವಿಶೇಷ ಪೂಜಾ



ವಿಧಿ ವಿಧಾನಗಳು ಪ್ರಾರಂಭವಾಗುವ ಹಿನ್ನಲೆಯಲ್ಲಿ ಶ್ರೀ ಚನ್ನಕೇಶವ, ಸೌಮ್ಯನಾಯಕಿ, ರಂಗನಾಯಕಿ ಅಮ್ಮನವರಿಗೆ ಧರಿಸುವ ಒಡವೆಗಳನ್ನು ಪ್ರಧಾನ ಅರ್ಚಕರಾದ ಬಿ.ಎಸ್.ಶ್ರೀನಿವಾಸ್ ಭಟ್ಟರು ಹಾಗೂ ಬಿ.ಕೆ. ನರಸಿಂಹ ಭಟ್ಟರ್ ಅವರಿಗೆ ತಹಶೀಲ್ದಾರ್ ಶ್ರೀಧರ್ ಕಂಕಣವಾಡಿ, ಪೊಲೀಸ್ ಇನ್ಸ್‌ಪೆಕ್ಟರ್ ರೇವಣ್ಣ ಕ್ಷೇತ್ರ ಶಿಕ್ಷಣಾಧಿಕಾರಿ ಭಾಗ್ಯಮ್ಮ, ದೇಗುಲದ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎನ್. ಯೋಗೇಶ್, ವರ್ತಕರ ಸಂಘದ ಅಧ್ಯಕ್ಷ ಗಿರಿಯಪ್ಪ ಶೆಟ್ಟಿ ಸೇರಿದಂತೆ ಅಡ್ಡಗಾರರು ವಿವಿಧ



ಸಂಘ ಸಂಸ್ಥೆಯ ಮುಖಂಡರ ಸಮ್ಮುಖದಲ್ಲಿ ಹಸ್ತಾಂತರಿಸಿದರು.

ತಹಸೀಲ್ದಾರ್ ಶ್ರೀಧರ್ ಕಂಕಣವಾಡಿ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಶ್ರೀ ಚನ್ನಕೇಶವ ಸ್ವಾಮಿಯ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಲಿದೆ. ಮೈಸೂರು ಮಹಾರಾಜರು ಸೇರಿದಂತೆ ಅನೇಕ ಭಕ್ತರು ವಿವಿಧ ಕಾಲಘಟ್ಟಗಳಲ್ಲಿ ದೇವರಿಗೆ ಬಂಗಾರದ ಆಭರಣಗಳನ್ನು ದೇಣಿಗೆಯಾಗಿ ನೀಡಿದ್ದು, ಅವುಗಳನ್ನು ಉತ್ಸವ ಮೂರ್ತಿ ಹಾಗೂ ಮೂಲ ಮೂರ್ತಿಗೆ ಅಲಂಕಾರವಾಗಿ ಧರಿಸಲಾಗುತ್ತದೆ ಎಂದರು.

ದೇವಾಲಯದ ಪ್ರಧಾನ ಅರ್ಚಕ ಶ್ರೀನಿವಾಸ್ ಭಟ್ ಅವರು ಧಾರ್ಮಿಕ ಮಂತ್ರೋಚ್ಚಾರಣೆಗಳೊಂದಿಗೆ ಜಾತ್ರಾ ಮಹೋತ್ಸವದ ಮಹತ್ವವನ್ನು ವಿವರಿಸಿ ಶುದ್ಧಿ ಪುಣ್ಯಾಹ ಕಾರ್ಯಗಳನ್ನು ನೆರವೇರಿಸಿ, ನಾಳೆ ಬೆಳಿಗ್ಗೆ ಶ್ರೀ ಚನ್ನಕೇಶವಸ್ವಾಮಿ ಹಾಗೂ ಸೌಮ್ಯನಾಯಕಿ ಅಮ್ಮನವರಿಗೆ ಧಾರಣೆ ಮಾಡಲಾಗುತ್ತದೆ. ಭಕ್ತರು ದರ್ಶನ ಪಡೆಯಲು ಅವಕಾಶ ಸಿಗಲಿದೆ ಸದ್ಭಕ್ತರು ಶ್ರೀ ಚನ್ನಕೇಶವ ಸ್ವಾಮಿಯ ಕೃಪೆಗೆ ಪಾತ್ರರಾಗುವಂತೆ ಅರ್ಚಕರು ಕೋರಿದರು.

ಪೋಲಿಸ್ ಇನ್ಸ್ಪಕ್ಟರ್ ರೇವಣ್ಣ ಮಾತನಾಡಿ, ಪ್ರತಿ ವರ್ಷಕ್ಕಿಂತ ಈ ವರ್ಷ ಹೆಚ್ಚಿನ ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗಾಗಿ ನಿಯೋಜಿಸಲಾಗುವುದು ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಇಲಾಖೆಯಿಂದ ಕ್ರಮ ವಹಿಸಲಾಗಿದೆ ಮಹಿಳೆಯರು ಬಂಗಾರದ ಬೆಲೆ ಗಗನಕೇರಿದ್ದು ರಥೋತ್ಸವದ ಸಮಯದಲ್ಲಿ ಮೈಮೇಲೆ ಎಚ್ಚರಿಕೆಯಿಂದ ಇರುವಂತೆ ಮನವಿ ಮಾಡಿದರು.

# ತಂಬಾಕಿಗೆ ಬೆಂಬಲ ಬೆಲೆ ಘೋಷಿಸಿ

• ಪ್ರಜೋದಯ ವರದಿ

**ಅರಕಲಗೂಡು:** ರಾಜ್ಯದ ತಂಬಾಕು ಬೆಳೆಗಾರರು ಎದುರಿಸುತ್ತಿರುವ ಸಂಕಷ್ಟದ ಕುರಿತು ವಿಧಾನಸಭೆ ಕಲಾಪದಲ್ಲಿ ಗಂಭೀರ ಚರ್ಚೆ ನಡೆಯಿತು.

ಈ ವೇಳೆ ಮಾತನಾಡಿದ ಶಾಸಕ ಎ. ಮಂಜು ಅವರು, ತಂಬಾಕಿಗೆ ತಕ್ಷಣವೇ ಬೆಂಬಲ ಬೆಲೆ ಘೋಷಿಸಿ ರೈತರ ನೆರವಿಗೆ ಸರ್ಕಾರ ಮುಂದಾಗಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ತಂಬಾಕು ಬೆಳೆಗಾರರು ಕಳೆದ ಕೆಲವು ತಿಂಗಳಿನಿಂದ ಗಂಭೀರ ಸಂಕಷ್ಟವನ್ನು ಎದುರಿಸುತ್ತಿದ್ದಾರೆ. ಹೊಗೆಸೊಪ್ಪಿಗೆ ಸಮರ್ಪಕ ಮಾರುಕಟ್ಟೆ ಬೆಲೆ ಸಿಗದೆ ಸುಮಾರು 53 ಸಾವಿರಕ್ಕೂ ಹೆಚ್ಚು ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಜೀವನ ಸಾಗಿಸುವುದೇ ಕಷ್ಟಕರವಾಗಿರುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ಗಮನ ಸೆಳೆದರು. ಬೆಳೆ ಬೆಳೆಸಲು ಮಾಡಿದ ವೆಚ್ಚವನ್ನೇ ವಾಪಸು ಪಡೆಯಲು ಸಾಧ್ಯವಾಗದೆ,



ಸಾಲದ ಹೊರೆ ಹೆಚ್ಚುತ್ತಿರುವುದರಿಂದ ಅನೇಕ ರೈತರು ಆತಂಕದಲ್ಲಿದ್ದಾರೆ ಎಂದರು. ತಂಬಾಕು ವಾಣಿಜ್ಯ ಇಲಾಖೆಯ ವ್ಯಾಪ್ತಿಗೆ ಬರುತ್ತದೆ ಎಂಬ ನೆಪ ಹೇಳಿ ಬೆಂಬಲ ಬೆಲೆ ಘೋಷಿಸಲು ವಿಳಂಬ ಮಾಡುವುದು ಸರಿಯಲ್ಲ. ರೈತರ ಹಿತದೃಷ್ಟಿಯಿಂದ ತಕ್ಷಣ ಕ್ರಮ ಕೈಗೊಂಡು, ಕನಿಷ್ಠ ಬೆಂಬಲ ಬೆಲೆ ಘೋಷಿಸಬೇಕು ಎಂದು ಒತ್ತಾಯಿಸಿದರು.

ಈ ವಿಷಯದಲ್ಲಿ ಸರ್ಕಾರ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳಬೇಕು ಮತ್ತು ರೈತರ ಹಿತವನ್ನು ಮೊದಲ ಆದ್ಯತೆಯಾಗಿ ಪರಿಗಣಿಸಬೇಕು. ಇದೇ ಸಂದರ್ಭದಲ್ಲಿ ವಿಮಾ ಯೋಜನೆಗಳ ವಿಷಯವನ್ನೂ ಪ್ರಸ್ತಾಪಿಸಿದ ಅವರು, ಇತರೆ ರಾಜ್ಯಗಳಲ್ಲಿ ತಂಬಾಕು ಬೆಳೆಗಾರರನ್ನು ಬೆಳೆ ವಿಮಾ ಯೋಜನೆ ವ್ಯಾಪ್ತಿಗೆ ಒಳಪಡಿಸಿರುವುದಾಗಿ ಹೇಳಿ, ಕರ್ನಾಟಕದ ರೈತರನ್ನು ಮಾತ್ರ ಹೊರಗಿಟ್ಟು ಅನ್ಯಾಯ ಮಾಡಲಾಗುತ್ತಿದೆ ಎಂದು ಮಂಜು ಅವರು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದ ರೈತರೂ ಸಮಾನ ಹಕ್ಕು ಹೊಂದಿದ್ದು, ಅವರನ್ನು ಕೂಡಲೇ ವಿಮಾ ಯೋಜನೆ ವ್ಯಾಪ್ತಿಗೆ ಸೇರಿಸಬೇಕು ಎಂದು ಒತ್ತಾಯಿಸಿದರು.

ಈ ವಿಚಾರಕ್ಕೆ ಪ್ರತಿಕ್ರಿಯಿಸಿದ ಸರ್ಕಾರ, ರೈತರ ಸಮಸ್ಯೆಗಳ ಕುರಿತು ಸಕಾರಾತ್ಮಕವಾಗಿ ಸ್ಪಂದಿಸುವ ಭರವಸೆ ನೀಡಿದರೆ, ಶೀಘ್ರದಲ್ಲೇ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷೆಯನ್ನು ರೈತರು ವ್ಯಕ್ತಪಡಿಸಿದ್ದಾರೆ.

# ಅರೇಹಳ್ಳಿಯಲ್ಲಿ ಸಿಡಿಲು ಬಡಿತ: ಹೊತ್ತಿ ಉರಿದ ತೆಂಗಿನಮರ

• ಪ್ರಜೋದಯ ವರದಿ

**ಬೇಲೂರು:** ತಾಲ್ಲೂಕಿನ ಅರೇಹಳ್ಳಿ ಪಟ್ಟಣದ ಕರೀಂ ಸಾಬ್ ಎಂಬವರಿಗೆ ಸೇರಿದೆ ಎನ್ನಲಾದ ತೆಂಗಿನಮರ ಬುಧವಾರ ಸಿಡಿಲು ಎರಗಿ ಮರಕ್ಕೆ ಬೆಂಕಿ ಹೊತ್ತಿಕೊಂಡ ಘಟನೆ ಜರುಗಿದ್ದು ಗ್ರಾಮಸ್ಥರ ಆತಂಕಕ್ಕೆ ಕಾರಣವಾಗಿದೆ.

ಪಟ್ಟಣದಲ್ಲಿ ಮಧ್ಯಾಹ್ನ ಗುಡುಗು, ಸಿಡಿಲ ಆರ್ಭಟದೊಂದಿಗೆ ಕೆಲಕಾಲ ಮಳೆ ಸುರಿಯಿತು. ಈ ವೇಳೆ ಬ್ರೈಟ್ ಕಾರ್ನರ್ ಮಾಲೀಕರಾದ ಮಝರ್ ಉಲ್ ಹಕ್ ಎಂಬುವವರಿಗೆ ಸೇರಿದ ಜಾಗದಲ್ಲಿ ಏಳೆಂಟು ಮರಗಳನ್ನು 1985ರಲ್ಲಿ ನಾಟಿ ಮಾಡಿದ್ದರು. ಉತ್ತಮವಾದ ಇಳುವರಿಯನ್ನು ನೀಡುತ್ತಿದ್ದ ಮರವು ಬುಧವಾರ ಸಿಡಿಲಜ ಬಡಿತಕ್ಕೆ ಅಗ್ನಿಗಾಹುತಿಯಾಗಿದೆ.

ವಿಪರೀತವಾಗಿ ಸುರಿಯುತ್ತಿದ್ದ



ಗಾಳಿ ಮಳೆಯಲ್ಲೂ ತೆಂಗಿನ ಮರ ಬೆಂಕಿಗಾಹುತಿಯಾಗುತ್ತಿರುವ ದೃಶ್ಯವನ್ನು ಸ್ಥಳೀಯರು ಮೊಬೈಲ್‌ನಲ್ಲಿ ಸೆರೆಹಿಡಿದಿದ್ದಾರೆ. 15 ನಿಮಿಷ ಕಾಲ ಮರ ಹೊತ್ತಿ ಉರಿಯಿತು. ಸಿಡಿಲು ಎರಗಿದ ಸಂದರ್ಭದಲ್ಲಿ ಸ್ಥಳೀಯ ಜನರ ಆತಂಕಕ್ಕೆ ಕಾರಣವಾಗಿದ್ದು ಯಾವುದೇ ಅಹಿತಕರ ಘಟನೆಗಳು ನಡೆದಿಲ್ಲ ಎನ್ನಲಾಗಿದೆ.

# ಮಾ.24 ರಂದು ನೇರ ಸಂದರ್ಶನ

**ಹಾಸನ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಮತ್ತು ನಾಗರಿಕ್ ಎಂಪವರ್ ಮೆಂಟ್ ಸಲ್ಯೂಸನ್ ಲಿಮಿಟೆಡ್ ಹಾಗೂ ಸಮೃದ್ದಿಸಿರಿ ಸಂಸ್ಥೆಯ ಸಹಭಾಗಿತ್ವದಲ್ಲಿ ಉದ್ಯೋಗ ನೀಡುವ ಸಂಬಂಧ ಮಾ. 24 ರಂದು ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನ ನಡೆಯಲಿದ್ದು, ಎಸ್‌ಎಸ್‌ಎಲ್‌ಸಿ, ಪಿಯುಸಿ, ಯಾವುದೇ ಪದವಿ ಪಾಸಾದ ಪುರುಷ/ಮಹಿಳಾ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.

ಸಂದರ್ಶನ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಸರ್ಕಾರಿ ಐ.ಟಿ.ಐ. ಕಾಲೇಜು ಆವರಣ ನಡೆಯಲಿದೆ, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08172-296374 ಸಂಪರ್ಕಿಸಹುದಾಗಿದೆ ಎಂದು ಉದ್ಯೋಗಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಪಣಾ ಮನೋಭಾವವೇ ಎನ್.ಎಸ್.ಎಸ್. ಧ್ಯೇಯ

## ಯುವ ಜನತೆಯಿಂದ ದೇಶದ ಬೆಳವಣಿಗೆ ಸಾಧ್ಯ

• ಪ್ರಜೋದಯ ವರದಿ

**ಅರಕಲಗೂಡು:** ಮಹಾತ್ಮ ಗಾಂಧೀಜಿಯವರ ಕನಸಿನ ಕೂಸು ಎನ್‌ಎಸ್‌ಎಸ್. ಯುವ ಜನತೆಯಿಂದ ಈ ದೇಶದ ಬೆಳವಣಿಗೆ ಸಾಧ್ಯ ಎಂಬ ದೃಷ್ಟಿಯಿಂದ ಹುಟ್ಟಿದ ಕಾರ್ಯಕ್ರಮವೇ ಈ ರಾಷ್ಟ್ರೀಯ ಸೇವಾ ಯೋಜನೆ ಶಿಬಿರ. ಕಾಲೇಜು ಮಟ್ಟದಿಂದ ದೇಶಮಟ್ಟದವರೆಗೆ ಸೇವಾ ಯೋಜನೆಯಲ್ಲಿ ಸೇವೆ ಮಾಡಿದರೆ 50 ಅಂಕಗಳನ್ನು ಗಳಿಸಬಹುದು. ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೇ ಅರ್ಪಣಾ ಮನೋಭಾವದಿಂದ ಈ ನೆಲಕ್ಕೆ, ಗ್ರಾಮಕ್ಕೆ ಅಥವಾ ಕಾಲೇಜಿಗೆ ಸಮರ್ಪಣಾ ಭಾವದಿಂದ ಸೇವೆಯನ್ನು ಮಾಡುವುದೇ ಎನ್‌ಎಸ್‌ಎಸ್‌ನ ಧ್ಯೇಯವಾಗಿದೆ ಎಂದು ಹಾಸನ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಸಂಯೋಜನಾಧಿಕಾರಿ ಯೋಗೇಶ್ ಅವರು ಹೇಳಿದರು.



ತಾಲ್ಲೂಕಿನ ವೆಂಕಟೇಶಪುರ ಗ್ರಾಮದಲ್ಲಿ ಕೊಣನೂರಿನ ಬಿ.ಎಂ. ಶೆಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಸಮಾರೋಪ ಭಾಷಣ ಮಾಡಿದ ಸಿಡಿಸಿ ಉಪಾಧ್ಯಕ್ಷ ಎಸ್.ಸಿ.ಚೌಡೇಗೌಡ ಅವರು ಮಾತನಾಡಿ, ಅತೀ ಹಿಂದುಳಿದ ಗ್ರಾಮಗಳು ಇನ್ನೂ ಇವೇ ಎಂಬುದನ್ನು ವಿದ್ಯಾರ್ಥಿಗಳಿಗೆ ತಿಳಿಯಲು ಈ ಗ್ರಾಮವನ್ನು ಆಯ್ಕೆ ಮಾಡಲಾಯಿತು. ಗ್ರಾಮೀಣ ಭಾಗದಲ್ಲಿ ಇನ್ನೂ ಹೊಂದಾಣಿಕೆ ಸಂಪ್ರದಾಯ ಜೀವಂತವಾಗಿವೆ ಎಂಬುದಕ್ಕೆ ಈ ಗ್ರಾಮವೇ ಸಾಕ್ಷಿ. ವಿದ್ಯಾರ್ಥಿಗಳು ತಮ್ಮ ಭವಿಷ್ಯದ ಜೀವನವನ್ನು ರೂಪಿಸಿಕೊಳ್ಳಲು ಎನ್‌ಎಸ್‌ಎಸ್ ನಂತಹ ಶಿಬಿರಗಳು ಅತ್ಯಂತ ಸಹಕಾರಿಯಾಗಿವೆ ಎಂದು ಕಿವಿಮಾತು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ರಾಜೀವ್ ಅವರು ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆ ಸಮಾಜದ ಋಣವನ್ನು ತೀರಿಸಲು ಇರುವ ಒಂದು ವೇದಿಕೆ. ಇದರಿಂದ ಸಮಾಜದಲ್ಲಿ ವಿದ್ಯಾರ್ಥಿಗಳಿಗೆ ಗೌರವ ಲಭಿಸುತ್ತದೆ,ಇಂತಹ ಶಿಬಿರದ ಪ್ರಯೋಜನವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಡಾ.ವಿ.ಡಿ. ಗುರುಪ್ರಸಾದ್, ಸಹ ಶಿಬಿರಾಧಿಕಾರಿಗಳಾದ ಐ.ಸುಶ್ಮಿತಾ, ಡಾ. ಸಿ. ಎನ್.ಸುರೇಶ್, ಸೋಮನಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ವಿ.ಎಸ್.ಚಂದ್ರು, ದೈಹಿಕ ಶಿಕ್ಷಣ ನಿರ್ದೇಶಕ ಗಿರೀಶ್, ಗ್ರಾಮದ ಯಜಮಾನ್ ಸ್ವಾಮಿಗೌಡ, ಗ್ರಾಮಸ್ಥರಾದ ಮೋಹನ್, ಗಣೇಶ್, ಕಾಲೇಜಿನ ಎಲ್ಲಾ ಭೋಧಕ, ಭೋಧಕೇತರ ಮತ್ತು ಸಿಬ್ಬಂದಿ ವರ್ಗ, ಶಿಬಿರಾರ್ಥಿಗಳು ಭಾಗವಹಿಸಿದ್ದರು.

## ಸರ್ಕಾರಿ ಶಾಲೆಯ ಮಕ್ಕಳಿಗೆ ಲೇಖನಿ ಸಾಮಗ್ರಿಗಳ ವಿತರಣೆ

# ಮಾನವೀಯತೆಯ ಸಂದೇಶ ಸಾರಿದ ಪುನೀತ್ ರಾಜಕುಮಾರ್

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಮನುಷ್ಯ ಹುಟ್ಟಿದ ಮೇಲೆ ಬಾಳಿನಲ್ಲಿ ಸಾರ್ಥಕವಾಗಲು ಪ್ರೀತಿ ಮತ್ತು ಮಾನವೀಯತೆಯನ್ನು ಬಾಳ ಪಯಣದ ನಿಜವಾದ ಅರ್ಥ ತಿಳಿಸಬೇಕು ಅದ್ಭುತ ವ್ಯಕ್ತಿತ್ವದ ಪುನಿತ್ ರಾಜ್‌ಕುಮಾರ್ ರವರು ಅನೇಕ ಜನರ ಬಾಳನ್ನು ಬೆಳಗಿಸಿ ನಂದಾದೀಪವಾಗಿ ಸಂದೇಶ ನೀಡಿದ್ದಾರೆ ಎಂದು ಡಿವೈಎಸ್‌ಪಿ ಕುಮಾರ್ ಅವರು ತಿಳಿದ್ದಾರೆ.

ಅವರು ಕನ್ನಡದ ಪವರ್‌ಸ್ಟಾರ್ ಪುನೀತ್ ರಾಜ್‌ಕುಮಾರ್ ಅವರ 51ನೇ ಹುಟ್ಟುಹಬ್ಬವನ್ನು ಪಟ್ಟಣದ ನಾನಾ ಕಡೆಗಳಲ್ಲಿ ಅವರ ಅಭಿಮಾನಿ ಬಳಗದಿಂದ ಜನೋಪಯೋಗಿ ಆಚರಿಸಲಾಯಿತು. ಪಟ್ಟಣದ ಹಳೇಬಸ್ ನಿಲ್ದಾಣದ ಡಾ.ಪುನಿತ್ ರಾಜ್ ಕುಮಾರ್ ಅಭಿಮಾನಿಗಳ ಬಳಗದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿ ಆಟೋ ಚಾಲಕರು ಕಾನೂನಿಗೆ ಗೌರವ ನೀಡಿ ಸಮವಸ್ತ್ರ ಧರಿಸಿ ಡಿಎಲ್, ಲೈಫ್ ಇನ್ಸೂರೆನ್ಸ್ ಮಾಡಿಸಿಕೊಳ್ಳಬೇಕು ಎಂದರು.

ಬಿಜೆಪಿ ಮುಖಂಡ ಸಿ.ಆರ್. ಚಿದಾನಂದ್ ಮಾತನಾಡಿ ಆಟೋದವರಿಗೆ ಲೈಫ್ ಇನ್ಸೂರೆನ್ಸ್‌ನ್ನು ಚಿದಾನಂದ್ ಅಭಿಮಾನಿ ಬಳಗದವರು ಹಂತ ಹಂತವಾಗಿ ಮಾಡಿಸಿಕೊಡುತ್ತಿದ್ದು, ಅಪ್ಪು ಅಭಿಮಾನಿಗಳು ಇಂದು ನೇತ್ರ ತಪಾಸಣೆ, ರಕ್ತದಾನ, ಆರೋಗ್ಯ ತಪಾಸಣೆ, ಅನ್ನ ಸಂತರ್ಪಣೆ ಏರ್ಪಡಿಸಿದ್ದು ಗೂರುನಹಳ್ಳಿ, ಆಲಗೊಂಡನಹಳ್ಳಿ, ಬರಗೂರು ಕೊಪ್ಪಲು, ಬಿರೂರು, ದೊಡ್ಡಮತಿಘಟ್ಟ, ಉಗ್ರನ ಕೊಪ್ಪಲಿನ 1ರಿಂದ 7ನೇ ತರಗತಿಯ ನೂರಾರು ಸರ್ಕಾರಿ ಶಾಲೆಯ ಮಕ್ಕಳಿಗೆ ಪರೀಕ್ಷಾ ಬೋರ್ಡ್ ಹಾಗೂ



ಲೇಖನಿ ಸಾಮಗ್ರಿಗಳು ವಿತರಿಸುತ್ತಿರುವುದು ಅಪ್ಪುರವರ ಸಮಾಜಮುಖಿ ಕಾರ್ಯವೈಖರಿಯನ್ನು ನೆನೆಸುತ್ತದೆ, ಇದು ಅಭಿನಂದನಾರ್ಹವಾಗಿದ್ದು ದ್ವಿಚಕ್ರ ವಾಹನ ಚಾಲಕರಿಗೆ ಎಲ್ಮೇಟ್ ಧರಿಸಿ ಚಾಲನೆ ಮಾಡಬೇಕು, ಸಂಚಾರಿ ಪೊಲೀಸ್ ನವರು ಈ ಬಗ್ಗೆ ಜನಜಾಗೃತಿ ಕಾರ್ಯಕ್ರಮವನ್ನು ಏರ್ಪಡಿಸಿದರೆ ನೂರಾರು ಎಲ್ಮೇಟ್‌ಗಳನ್ನು ಉಚಿತವಾಗಿ ನೀಡಲಾಗುವುದು ಎಂದು ಹೇಳಿದರು.

ಸಂಚಾರಿ ಪೊಲೀಸ್ ಇನ್‌ಸ್ಪೆಕ್ಟರ್ ಚರಣ್‌ಗೌಡ ಮಾತನಾಡಿ ಜೀವ ರಕ್ಷಣೆಗೆ ಜಾಗೃತಿ ಕಾರ್ಯಕ್ರಮ ಹಾಗೂ ರಸ್ತೆ ಸಂಚಾರದ ಅರಿವಿನ ಕಾರ್ಯಕ್ರಮವನ್ನು ಸದ್ಯದಲ್ಲೇ ಸಾರ್ವಜನಿಕವಾಗಿ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಡಾ.ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಪುಟ್ಟಣ್ಣ ಗೋಕಾಕ್ ಅವರು ವಹಿಸಿದ್ದರು.

ತಾಲ್ಲೂಕು ಆಟೋ ಚಾಲಕರ ಸಂಘದ ಅಧ್ಯಕ್ಷ ಪುರಿಮಂಜಣ್ಣ, ಗಜಾನನ ಮನೋಹರ್, ರೈತಸಂಘದ ತಾಲೂಕು ಅಧ್ಯಕ್ಷ ಸಿ.ಜಿ.ರವಿ, ಪ್ರೇಮಮ್ಮ, ಮಾಜಿ ಪುರಸಭಾ ಸದಸ್ಯ ಶರವಣಕುಮಾರ್, ವಿನಾಯಕ ಆಟೋ ಚಾಲಕರ ಸಂಘದ ಅಧ್ಯಕ್ಷ ರಾಮಣ್ಣ, ಮಂಜಣ್ಣ, ಬಾಬಣ್ಣ, ರುದ್ರೇಶ್, ತೀರ್ಥಾಚಾರಿ, ಜಾವಿದ್, ಶ್ರೀನಿವಾಸ್, ಗಂಗಣ್ಣ, ಪ್ರಸನ್ನ, ರಾಮಚಂದ್ರು, ಮಹೇಶ್, ದಿನೇಶ್ ಸೇರಿದಂತೆ ಹಲವರು ಪುನೀತ್ ರಾಜ್‌ಕುಮಾರ್ ಭಾವಚಿತ್ರಕ್ಕೆ ಪುಷ್ಪನಮನದ ಮೂಲಕ ಗೌರವ ಸಲ್ಲಿಸಿದರು.

ಆಟೋ ನಿಲ್ದಾಣದ ಆವರಣದಲ್ಲಿಯೇ ಆಯೋಜಿಸಿದ್ದ ರಕ್ತದಾನ ಶಿಬಿರದಲ್ಲಿ 25ಕ್ಕೂ ಹೆಚ್ಚು ಮಂದಿ ರಕ್ತದಾನ ಮಾಡಿದರು.

# ಮಾ.23 ರಂದು ದೇವರ ದಾಸಿಮಯ್ಯ ಜಯಂತಿ

**ಹಾಸನ:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಮಾ.23 ರಂದು ಹಾಸನಾಂಬ ಕಲಾಕ್ಷೇತ್ರದಲ್ಲಿ ಬೆಳಿಗ್ಗೆ 11 ಗಂಟೆಗೆ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಭೈರೇಗೌಡ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ, ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಅರಸೀಕೆರೆ ಕ್ಷೇತ್ರದ ಶಾಸಕರಾದ ಕೆ.ಎಂ. ಶಿವಲಿಂಗೇಗೌಡ ಅವರು ಗೌರವ ಉಪಸ್ಥಿತರಿರಲಿದ್ದು, ಶಾಸಕ ಸ್ವರೂಪ್ ಪ್ರಕಾಶ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಸಂಸದ ಶ್ರೇಯಸ್ ಎಂ. ಪಟೇಲ್, ಶಾಸಕರುಗಳಾದ ಹೆಚ್.ಡಿ ರೇವಣ್ಣ, ಸಿ.ಎನ್ ಬಾಲಕೃಷ್ಣ, ಎ.ಮಂಜು, ಹೆಚ್.ಕೆ ಸುರೇಶ್, ಸಿಮೆಂಟ್ ಮಂಜು ಭಾಗವಹಿಸಲಿದ್ದು, ಎಸ್. ಕೋಟ್ರೋಶ್ ಉಪ್ಪಾರ್ ಅವರು ಉಪನ್ಯಾಸ ನೀಡಲಿದ್ದಾರೆ.

## : : ಪ್ರಮಾಣ ಪತ್ರ : :

ಫಿಡೇಲಿಸ್ ಗ್ರೇಸ್‌ದಾಸ್ ಎ ಬಿನ್ ಲೇಟ್ ಅರುಲ್ ದಾಸ್ ವಯಸ್ಸು ಸುಮಾರು 49 ವರ್ಷಗಳು. ವಾಸ- ಸೆರೀನ್, ಸೈಟ್ ನಂ.1, ಖಾತ ನಂ. 1390, 3ನೇ ತಿರುವು, ಕಿತ್ತೂರ್ ರಾಣಿ ಚೆನ್ನಮ್ಮ ರಸ್ತೆ, ವಿವೇಕನಗರ, ಹಾಸನ- 573202, ಕರ್ನಾಟಕ ರಾಜ್ಯ ಆದ ನಾನು ಈ ಮೂಲಕ ಪ್ರಮಾಣ ಮಾಡಿ ಹೇಳುವುದೇನೆಂದರೆ:-

1. ನಾನು ಭಾರತೀಯ ಪಾಸ್‌ಪೋರ್ಟ್ ನವೀಕರಣಕ್ಕಾಗಿ ಅರ್ಜಿ ಸಲ್ಲಿಸುತ್ತಿದ್ದೇನೆ.
2. ನನ್ನ ಪಾಸ್‌ಪೋರ್ಟ್‌ನಲ್ಲಿ ನನ್ನ ತಂದೆ ಹೆಸರು ಅರುಲ್ ದಾಸ್ ಎಂದು ನಮೂದಾಗಿದೆ.
3. ನನ್ನ ಆಧಾರ್ ಕಾರ್ಡಿನಲ್ಲಿ ನನ್ನ ತಂದೆಯ ಹೆಸರು ಅರುಲ್ ದಾಸ್ ಜಿ ಎಂದು ನಮೂದಾಗಿದೆ.
4. ಅರುಲ್ ದಾಸ್ ಹಾಗೂ ಅರುಲ್ ದಾಸ್ ಜಿ – ಈ ಎರಡೂ ಹೆಸರುಗಳು ನನ್ನ ತಂದೆಯ ಹೆಸರಾಗಿರುತ್ತದೆ ಹಾಗೂ ಏಕವ್ಯಕ್ತಿಯ ಹೆಸರಾಗಿರುತ್ತದೆ.
5. ಈ ಹೆಸರುಗಳ ವ್ಯತ್ಯಾಸವು ಇನಿಷಿಯಲ್ ಸೇರ್ಪಡೆಯಾಗಿದ್ದು, ಒಂದೇ ವ್ಯಕ್ತಿಯಾದ ನಮ್ಮ ತಂದೆಗೆ ಸೇರಿದ್ದಾಗಿರುತ್ತದೆ. ಈ ಹೆಸರು ಬೇರೆ ಬೇರೆ ವ್ಯಕ್ತಿಗಳನ್ನು ಸೂಚಿಸುವುದಿಲ್ಲ.
6. ನನ್ನ ತಂದೆ ನಿಧನರಾಗಿದ್ದಾರೆ.
7. ಮೇಲೆ ನೀಡಿರುವ ಮಾಹಿತಿಯು ನನ್ನ ಜ್ಞಾನ ಮತ್ತು ನಂಬಿಕೆಯ ಪ್ರಕಾರ ಸತ್ಯ ಮತ್ತು ಸರಿಯಾಗಿದೆ ಎಂದು ಘೋಷಿಸುತ್ತೇನೆ. ನನ್ನ ಪಾಸ್‌ಪೋರ್ಟ್‌ನಲ್ಲಿನಮೂದಾಗಿರುವ ತಂದೆಯ ಹೆಸರಿನೊಂದಿಗೆ ನನ್ನ ಪಾಸ್‌ಪೋರ್ಟ್ ಅರ್ಜಿಯನ್ನು ಪರಿಗಣಿಸಲು ಸಂಬಂಧಪಟ್ಟ ಅಧಿಕಾಇಗಳನ್ನು ವಿನಮ್ರವಾಗಿ ವಿನಂತಿಸುತ್ತೇನೆ.

ದಿನಾಂಕ: 18.03.2026 ಪ್ರಮಾಣದಾರರು

: : ದೃಢೀಕರಣ : :

ಮೇಲೆ ಹೇಳಿರುವ ವಿಷಯಗಳು ನನ್ನ ಜ್ಞಾನ ಮತ್ತು ನಂಬಿಕೆಯ ಪ್ರಕಾರ ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ ಮತ್ತು ಯಾವುದೇ ಮಹತ್ವದ ವಿಷಯವನ್ನು ಮುಚ್ಚಿಡಲಾಗಿಲ್ಲ.

ಹಾಸನದಲ್ಲಿ ದೃಢೀಕರಿಸಲಾಗಿದೆ.

ದಿನಾಂಕ: 18.03.2026 ಪ್ರಮಾಣದಾರರು

ಸ್ಥಳ : ಹಾಸನ.

# ಎಸ್‌ಎಸ್‌ಎಸ್‌ಎಲ್‌ಸಿ ಮೊದಲ ಪರೀಕ್ಷೆ ಸುಸೂತ್ರ

## ಶುಭ ಹಾರೈಸಿದ ಶಾಸಕ ಬಾಲಕೃಷ್ಣ | ಅನಾರೋಗ್ಯದ ನಡುವೆಯೂ ವಿದ್ಯಾರ್ಥಿ ಹಾಜರು

• ಪ್ರಜೋದಯ ವರದಿ





**ಹಾಸನ:** ರಾಜ್ಯಾದ್ಯಂತ ಆರಂಭವಾಗಿರುವ ಎಸ್ ಎಸ್‌ಎಲ್‌ಸಿ ಮೊದಲ ಪರೀಕ್ಷೆ ಬುಧವಾರ ಸುಗಮವಾಗಿ ನಡೆದಿದೆ.

ಮೊದಲ ದಿನ ನಡೆದ ಕನ್ನಡ ಪರೀಕ್ಷೆಗೆ ವಿದ್ಯಾರ್ಥಿಗಳು ಅತ್ಯುತ್ಸಾಹದಿಂದ ಬಂದರು. ಜಿಲ್ಲಾದ್ಯಂತ 78 ಪರೀಕ್ಷಾ ಕೇಂದ್ರ ತೆರೆದಿದ್ದು ಕೆಲವೆಡೆ ಮಕ್ಕಳಿಗೆ ಹೂಗುಚ್ಛ ನೀಡಿ ಶುಭ ಕೋರಿದರು. ಜನಪ್ರತಿನಿಧಿಗಳು ಹಾಗು ಅಧಿಕಾರಿಗಳು ಮಕ್ಕಳಿಗೆ ಆತ್ಮಸ್ಥೈರ್ಯ ತುಂಬಿದರು. ಪರೀಕ್ಷಾ ಕೇಂದ್ರದ ಸುತ್ತ 200ಮೀ. ವ್ಯಾಪ್ತಿ ನಿಷೇಧಾಜ್ಞೆ ಜಾರಿಗೊಳಿಸಿದ್ದರಿಂದ ಪರೀಕ್ಷಾ ಸಮಯದಲ್ಲಿ ಸಾರ್ವಜನಿಕರ ಓಡಾಟ ನಿಷೇಧಿಸಲಾಗಿತ್ತು. ಹತ್ತಿರದ ಜೆರಾಕ್ಸ್ ಅಂಗಡಿಗಳನ್ನು ಬಂದ್ ಮಾಡಿಸಲಾಗಿತ್ತು. ಯಾವುದೇ ಅಕ್ರಮಗಳಿಗೆ ಅವಕಾಶ ನೀಡದೆ ಪರೀಕ್ಷೆ ನಡೆಸಲಾಯಿತು.

**ಸಕಲೇಶಪುರದಲ್ಲಿ 1203 ಮಕ್ಕಳು ಹಾಜರು**

ಸಕಲೇಶಪುರ ತಾಲ್ಲೂಕಿನಲ್ಲಿ 599 ಹುಡುಗರು, 604 ಬಾಲಕಿಯರು ಸೇರಿ 1203 ವಿದ್ಯಾರ್ಥಿಗಳು ಪರೀಕ್ಷೆ ಬರೆದರು. ಈಗಾಗಲೇ ಮೂರು ಹಂತಗಳಲ್ಲಿ ಪೂರ್ವ ಸಿದ್ಧತಾ ಪರೀಕ್ಷೆಗಳು ಯಶಸ್ವಿಯಾಗಿ ನಡೆದಿದ್ದರಿಂದ ವಿದ್ಯಾರ್ಥಿಗಳಿಗೆ ಉತ್ತಮ ತಯಾರಿ ಸಾಧ್ಯವಾಗಿದ್ದು, ಪರಿಣಾಮ ಪರೀಕ್ಷೆಯೂ ಸುಗಮವಾಗಿ ನಡೆಯಿತು.

ತಾಲ್ಲೂಕಿನ 9 ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಹಾಗು ವೆಬ್‌ಕಾಸ್ಟಿಂಗ್ ವ್ಯವಸ್ಥೆಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಿದ್ದು, ಅಕ್ರಮ ಚಟುವಟಿಕೆಗಳಿಗೆ ಆಸ್ಪದ ನೀಡಲಿಲ್ಲ. ಪರೀಕ್ಷಾ ಕೇಂದ್ರಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ, ಸಮರ್ಪಕ ಪೀಠೋಪಕರಣ ಸೇರಿ ಎಲ್ಲಾ ಮೂಲಸೌಲಭ್ಯ ಒದಗಿಸಲಾಗಿತ್ತು.

ವಿದ್ಯಾರ್ಥಿಗಳ ಪ್ರಯಾಣಕ್ಕೆ ಕೆಎಸ್‌ಆರ್‌ಟಿಸಿ ಮೂಲಕ ಉಚಿತ ಪ್ರಯಾಣ ವ್ಯವಸ್ಥೆ ಕಲ್ಪಿಸಲಾಗಿದ್ದು, ಅರಣ್ಯ ಪ್ರದೇಶಗಳಿಂದ ಬರುವ ವಿದ್ಯಾರ್ಥಿಗಳಿಗೆ ಅರಣ್ಯ ಇಲಾಖೆಯ ಸಹಕಾರವೂ ಲಭ್ಯವಾಯಿತು. ಆರೋಗ್ಯ ಇಲಾಖೆಯ ವತಿಯಿಂದ ಓಆರ್‌ಎಸ್ ಪೌಡರ್, ಔಷಧಿ ಹಾಗು ಅಗತ್ಯವಿದ್ದಲ್ಲಿ ಆರೋಗ್ಯ ಸಿಬ್ಬಂದಿ ವ್ಯವಸ್ಥೆ ಮಾಡಲಾಗಿತ್ತು.

**ಶಾಸಕ ಸಿ.ಎನ್.ಬಾಲಕೃಷ್ಣ ಆತ್ಮಸ್ಥೈರ್ಯ**

ವಿದ್ಯಾರ್ಥಿಗಳು ಭಯ ಬಿಟ್ಟು ಆತ್ಮಸ್ಥೈರ್ಯದಿಂದ ಪರೀಕ್ಷೆ ಎದುರಿಸಿದಾಗ ಮಾತ್ರ ಉತ್ತಮ ಫಲಿತಾಂಶ ಪಡೆಯಲು ಸಾಧ್ಯವೆಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ತಿಳಿಸಿದರು.

ಚನ್ನರಾಯಪಟ್ಟಣದ ಮಾಧ್ಯಮಿಕ ಶಾಲಾ ಆವರಣದಲ್ಲಿರುವ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಗುಲಾಬಿ ನೀಡಿ ಶುಭ ಹಾರೈಸಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ 2808 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದು, 12 ಪರೀಕ್ಷಾ ಕೇಂದ್ರ ತೆರೆಯಲಾಗಿದೆ. 10ನೇ ತರಗತಿ ಜೀವನದ ಪ್ರಮುಖ ಘಟ್ಟ. ಪ್ರತಿಯೊಬ್ಬರೂ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಿರಿ ಎಂದು ಶುಭ ಹಾರೈಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಎನ್.ದೀಪ ಅವರು ಮಾತನಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಎಲ್ಲರ ಜೀವನದಲ್ಲೂ ಅತಿ ಮುಖ್ಯ ಘಟ್ಟ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಎಲ್ಲಾ ಕ್ರಮ ಕೈಗೊಳ್ಳಲಾಗಿದೆಯೆಂದರು.

ಕ್ಷೇತ್ರ ಸಂಪನ್ಮೂಲ ಸಮನ್ವಯ ಅಧಿಕಾರಿ ಕೆ.ಎನ್.ಅನಿಲ್, ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಬಿ.ಆರ್.ರಮೇಶ್, ಪ್ರಶ್ನೆ ಪತ್ರಿಕೆ ಅಭಿರಕ್ಷಕ ಕುಮಾರ್ ಇತರರಿದ್ದರು.

**ಅರಸೀಕೆರೆಯಲ್ಲಿ ಮಕ್ಕಳಿಗೆ ಪ್ರೋತ್ಸಾಹ**

ಅರಸೀಕೆರೆಯ ಬಾಯ್ಸ್ ಜೂನಿಯರ್ ಕಾಲೇಜು ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಮೋಹನ್‌ಕುಮಾರ್ ಅವರು ಗುಲಾಬಿ ಹೂ ನೀಡುವ ಮೂಲಕ ಮಕ್ಕಳಿಗೆ ಪ್ರೋತ್ಸಾಹಿಸಿದರು.


ನಗರದಲ್ಲಿ ನಾಲ್ಕು ಸೇರಿ 11 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. 3351 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆಂದು ಬಿಇಒ ಹೇಳಿದರು. ಶಿಕ್ಷಣ ಸುಧಾರಣಾ ಸಮಿತಿ ಸದಸ್ಯ ವೈ.ಕೆ. ದೇವರಾಜ್ ಮತ್ತಿತರರಿದ್ದರು.

**ಐಸಿಯುನಿಂದ ಪರೀಕ್ಷಾ ಕೊಠಡಿಗೆ**

ಅನಾರೋಗ್ಯದಿಂದ ಹಾಸನದ ಖಾಸಗಿ ಆಸ್ಪತ್ರೆಯ ಐಸಿಯು ವಾರ್ಡ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ತಾಲ್ಲೂಕಿನ ರೋಟರಿ ಶಾಲೆಯ ಜುನೈದ್ ಎಂಬ ವಿದ್ಯಾರ್ಥಿ ಪರೀಕ್ಷೆ ಬರೆದನು. ತೀವ್ರ ಜ್ವರದಿಂದ ಬಳಲುತ್ತಿದ್ದರೂ ಪರೀಕ್ಷೆ ಬರೆಯಲು ಬಂದಿದ್ದ ಆತನ ಶಿಕ್ಷಣ ಪ್ರೇಮಕ್ಕೆ ಶಿಕ್ಷಕರು ಮೆಚ್ಚುಗೆ ಸೂಚಿಸಿದರು.

# ರೈಲ್ವೆ ಪರೀಕ್ಷೆಯಲ್ಲಿ ಕನ್ನಡ ಕಡೆಗಣನೆಗೆ ಕದಂಬ ಸೈನ್ಯ ಆಕ್ರೋಶ

• ಪ್ರಜೋದಯ ವರದಿ



**ಹಾಸನ:** ರೈಲ್ವೆ ಇಲಾಖೆ ಪರೀಕ್ಷೆಯಲ್ಲಿ ಕನ್ನಡಿಗರಿಗೆ ನಿರಂತರವಾಗಿ ಅನ್ಯಾಯ ಮಾಡುತ್ತಿದ್ದು, ಇಂತಹ ಪ್ರಮಾದ ಮರುಕಳಿ ಸದಂತೆ ಎಚ್ಚರ ವಹಿಸ ಬೇಕೆಂದು ಆಗ್ರಹಿಸಿ ಕದಂಬ ಸೈನ್ಯ ಪದಾಧಿಕಾರಿಗಳು ಜಿಲ್ಲಾಡಳಿತದ ಮೂಲಕ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಬುಧವಾರ ಮನವಿ ಸಲ್ಲಿಸಿದರು.

ನೈರುತ್ಯ ರೈಲ್ವೆಯ ಗೂಡ್ಸ್ ಟ್ರೈನ್ ಮ್ಯಾನೇಜರ್ ಹುದ್ದೆ ಪರೀಕ್ಷೆಯಲ್ಲಿ ಕನ್ನಡ ಕಡೆಗಣಿಸಿದ್ದರ ಪರಿಣಾಮ ಮಂಗಳವಾರದ ಪರೀಕ್ಷೆ ರದ್ದುಪಡಿಸುವಂತಾಗಿದೆ. ಕೇವಲ ಇಂಗ್ಲಿಷ್ ಹಾಗು ಹಿಂದಿ ಭಾಷೆಗೆ ಮನ್ನಣೆ ನೀಡುವುದು ಸರಿಯಾದ ಕ್ರಮವಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು.

194 ಹುದ್ದೆ ಮತ್ತು ಎಲ್‌ಡಿಸಿಇ 101 ಮುಂಬಡ್ತಿ ಹುದ್ದೆಗಳಿಗೆ 2025 ರಲ್ಲೇ ಅಧಿಸೂಚನೆ ಹೊರಡಿಸಲಾ ಗಿತ್ತು. ಆಗ ಕನ್ನಡದಲ್ಲೂ ಪರೀಕ್ಷೆ ಬರೆಯುವ ಅವಕಾಶವಿದೆಯೆಂದು ತಿಳಿಸಲಾಗಿತ್ತು. ಪರೀಕ್ಷೆಗೆ ನಾಲ್ಕೈದು ದಿನ ಗಳಿರುವಾಗ ಹಿಂದಿ ಮತ್ತು ಇಂಗ್ಲಿಷ್‌ನಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶ ಎಂದು ಇಲಾಖೆ ತಿಳಿಸಿದ್ದರಿಂದ ಕನ್ನಡಿಗರಿಗೆ ಅನ್ಯಾಯವಾಗಿದೆ ಎಂದರು.

ಸಚಿವ ವಿ.ಸೋಮಣ್ಣ ಅವರು ಪ್ರತಿ ಸಂದರ್ಭದಲ್ಲೂ ಕನ್ನಡಿಗರಿಗೆ ಅನ್ಯಾಯವಾಗಲು ಬಿಡುವುದಿಲ್ಲ ವೆಂದು ಹೇಳಿಕೊಂಡು ಬಂದಿದ್ದರು. ಅವರ ಭರವಸೆ ಹುಸಿಯಾಗಿದೆ. ಆಯಾ ರಾಜ್ಯ ಭಾಷೆಯಲ್ಲೇ ಪರೀಕ್ಷೆ ನಡೆಸಬೇಕೆಂದು 1992ರಲ್ಲೇ ಕಾನೂನು ಜಾರಿಗೊಳಿಸಲಾಗಿದೆ. ಆದರೂ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ಅನುಸರಿಸುತ್ತಿರುವುದು ಖಂಡನೀಯವೆಂದರು.

ರೈಲ್ವೆಯಂತಹಮಹತ್ವದ ಕೇಂದ್ರೀಯ ಇಲಾಖೆಗಳಿಂದ ಕನ್ನಡಿ ಗರನ್ನು ಹೊರಗಿಡುವುದೇ ಸರ್ಕಾರದ ಹುನ್ನಾರವಾಗಿದೆ. ರೈಲ್ವೆ ಇಲಾಖೆ ಯಲ್ಲಿ ಬಹುತೇಕ ಹಿಂದಿ ಭಾಷಿಕರೇ ಇದ್ದಾರೆ. ಈ ಸಮಸ್ಯೆಯನ್ನು ಸಚಿವ ರಾದ ವಿ.ಸೋಮಣ್ಣ, ಪ್ರಲ್ಹಾದ್ ಜೋಶಿ, ಶೋಭಾ ಕರಂದ್ಲಾಜೆ ಹಾಗು ರಾಜ್ಯದ ಸಂಸದರು ಗಂಭೀರವಾಗಿ ಪರಿಗಣಿಸಬೇಕು. ಇದೇ ರೀತಿ ಕನ್ನಡವನ್ನು ನಿರ್ಲಕ್ಷಿಸಿದರೆ ರಾಜ್ಯಾದ್ಯಂತ ಪ್ರತಿಭಟನೆ ನಡೆಸಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು. ಜಿಲ್ಲಾಧಿಕಾರಿ ಕಚೇರಿ ಸಹಾಯಕ ರಮೇಶ್ ಅವರಿಗೆ ಮನವಿ ಸಲ್ಲಿಸಲಾಯಿತು. ಕದಂಬ ಸೈನ್ಯ ಜಿಲ್ಲಾಧ್ಯಕ್ಷ ಎ. ಹೆಚ್.ಗಣೇಶ್, ಸಾಂಸ್ಕೃತಿಕ ಕಾರ್ಯದರ್ಶಿ ಪ್ರತಿಮಾ ಹಾಸನ, ತಾಲ್ಲೂಕು ಅಧ್ಯಕ್ಷರಾದ ರಾಜೇಗೌಡ, ಪುಟ್ಟಸ್ವಾಮಿಗೌಡ, ವೆಂಕಟೇಗೌಡ ಮತ್ತಿತರರಿದ್ದರು.

# ಇಂದು-ನಾಳೆ ಪುರದಮ್ಮ ಜಾತ್ರೆ

• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ಬೀಕನಹಳ್ಳಿಯ ಶ್ರೀ ಪುರದಮ್ಮ ಜಾತ್ರಾ ಮಹೋತ್ಸವ ಹಿನ್ನಲೆಯಲ್ಲಿ ಶಾಸಕ ಹೆಚ್.ಪಿ. ಸ್ವರೂಪ್ ಅವರು ಬುಧವಾರ ಪೂರ್ವಭಾವಿ ಸಭೆ ನಡೆಸಿದರು. ಮಾ.19 ಹಾಗು 20 ರಂದು ಜಾತ್ರಾ ಮಹೋತ್ಸವ ನಡೆಯಲಿದ್ದು, ಆ ಹಿನ್ನಲೆಯಲ್ಲಿ ಅಧಿಕಾರಿಗಳು ಹಾಗು ಸ್ಥಳೀಯರೊಂದಿಗೆ ಚರ್ಚೆ ನಡೆಸಲಾಯಿತು.

ಶಾಸಕ ಹೆಚ್.ಪಿ. ಅವರು ಮಾತನಾಡಿ, ನಾಡಿನಾದ್ಯಂತ ಪ್ರಸಿದ್ಧಿ ಪಡೆದಿರುವ ಪುರದಮ್ಮ ಜಾತ್ರೆಯನ್ನು ಅರ್ಥಪೂರ್ಣವಾಗಿಸುವುದು ನಮ್ಮೆಲ್ಲರ ಜವಾಬ್ದಾರಿ. ಪುರದಮ್ಮ ದೇವಾಲಯಕ್ಕೆ ಪ್ರತಿದಿನ ಸಾವಿರಾರು ಭಕ್ತರು ಬರುತ್ತಾರೆ. ದೇವಾಲಯದ ಅಭಿವೃದ್ಧಿ ನಮ್ಮ ಜವಾಬ್ದಾರಿ ಎಂದರು. ಜಾತ್ರಾ ಮಹೋತ್ಸವದ ಹಿನ್ನಲೆ ಯಲ್ಲಿ ಹುಂಡಿ ತೆರೆಯಲಾಯಿತು. ಆರಕ್ಷಕ ನಿರೀಕ್ಷಕ ಕುಮಾರ್, ಕಂದಾಯ ಇಲಾಖೆ ಅಧಿಕಾರಿಗಳು, ಗ್ರಾಮಸ್ಥರು ಇದ್ದರು.

### ಕ್ರಮ ಕೈಗೊಳ್ಳುವಂತೆ ಆಟೋ ಚಾಲಕರಿಂದ ಜಿಲ್ಲಾಡಳಿತಕ್ಕೆ ಮನವಿ

# ಖಾಸಗಿ ಗ್ಯಾಸ್ ಬಂಕ್‌ಗಳಲ್ಲಿ ಹೆಚ್ಚುವರಿ ದರ ವಸೂಲಿ

• ಪ್ರಜೋದಯ ವರದಿ



**ಹಾಸನ:** ಆಟೋಗಳಿಗೆ ಗ್ಯಾಸ್ ಸರಬರಾಜಿನಲ್ಲಿ ಉಂಟಾಗಿರುವ ತೊಂದರೆ ಹಾಗು ಖಾಸಗಿ ಗ್ಯಾಸ್ ಬಂಕ್‌ಗಳಲ್ಲಿ ಹೆಚ್ಚುವರಿ ದರ ವಸೂಲಿ ಮಾಡುತ್ತಿರುವುದನ್ನು ಖಂಡಿಸಿ ತಾಲ್ಲೂಕು ಆಟೋ ಚಾಲಕರು ಮತ್ತು ಮಾಲೀಕರ ಸಂಘದಿಂದ ಜಿಲ್ಲಾಧಿಕಾರಿಗೆ ಬುಧವಾರ ಮನವಿ ಸಲ್ಲಿಸಿದರು.

ಯುದ್ಧದ ಪರಿಣಾಮದಿಂದ ಗ್ಯಾಸ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿದು. ಸರ್ಕಾರಿ ಸಂಸ್ಥೆಗಳಾದ ಹೆಚ್‌ಪಿ ಗ್ಯಾಸ್ ಮತ್ತು ಇಂಡೇನ್ ಗ್ಯಾಸ್ ಬಂಕ್‌ಗಳಲ್ಲಿ ಆಟೋಗಳಿಗೆ ಅಗತ್ಯ ಪ್ರಮಾಣದಲ್ಲಿ ಗ್ಯಾಸ್ ದೊರೆ ಯುತ್ತಿಲ್ಲ. ಆದರೆ, ಖಾಸಗಿ ಬಂಕುಗಳಲ್ಲಿ ಗ್ಯಾಸ್ ಲಭ್ಯವಿದ್ದರೂ, ದರವನ್ನು ಗಂಟೆಗೆ ಗಂಟೆಗೆ ಹೆಚ್ಚಿಸಲಾಗುತ್ತಿದೆಂದು ಆಟೋ ಚಾಲಕರು ಅಸಮಾಧಾನ ವ್ಯಕ್ತಪಡಿಸಿದರು.

ಹಿಂದಿನಂತೆ ಪ್ರತಿ ಲೀಟರ್ ಗ್ಯಾಸ್‌ಗೆ 65.90 ರೂ. ನೀಡಿ ಆಟೋ ಸಂಚರಿಸುತ್ತಿದ್ದೇವೆ. ಆದರೆ, ಈಗ ಖಾಸಗಿ ಬಂಕ್‌ಗಳಲ್ಲಿ 77.80 ರೂ. ಹೆಚ್ಚು ಹಣ ನೀಡಿ ಗ್ಯಾಸ್ ತುಂಬಿಸಿಕೊಳ್ಳ ಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಅದರಿಂದ ದಿನನಿತ್ಯದ ಆದಾಯದ ಮೇಲೆ ತೀವ್ರ ಪರಿಣಾಮ ಬೀರಿದೆ ಎಂದರು.

ಕೋವಿಡ್ ನಂತರ ಆಟೋ ಚಾಲಕರು ಸಂಕಷ್ಟ ಅನುಭವಿಸುತ್ತಿ ದ್ದಾರೆ. ಮಹಿಳೆಯರಿಗೆ ಉಚಿತ ಬಸ್ ಯೋಜನೆಯಿಂದ ನಮ್ಮ ಆದಾಯ ಕುಸಿತವಾಗಿದೆ. ಈ ನಡುವೆ ಗ್ಯಾಸ್ ಕೊರತೆ ಮತ್ತು ದರ ಏರಿಕೆ ಮತ್ತಷ್ಟು ಸಂಕಷ್ಟಕ್ಕೆ ತಳ್ಳಿದೆ. ಸರ್ಕಾರಿ ಸಂಸ್ಥೆಯ ಬಂಕ್‌ಗಳಿಗೆ ಗ್ಯಾಸ್ ಸರಬರಾಜು ಕಡಿಮೆಯಾಗಿದ್ದರೂ, ಖಾಸಗಿ ಬಂಕ್‌ಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಗ್ಯಾಸ್ ಸರಬರಾಜು ಆಗುತ್ತಿದೆ ಎಂಬ ಅನುಮಾನ ವ್ಯಕ್ತಪಡಿಸಿದ ಚಾಲಕರು, ಈ ಬಗ್ಗೆ ಪರಿಶೀಲನೆ ನಡೆಸುವಂತೆ ಒತ್ತಾಯಿಸಿದರು.

ಹೆಚ್ಚಿದ ದರದ ನಡುವೆಯೂ ಪ್ರಯಾಣಿಕರಿಂದ ಹೆಚ್ಚುವರಿ ಹಣ ಪಡೆಯಲು ಸಾಧ್ಯವಾಗದೆ, ಪ್ರತಿನಿತ್ಯ ವಾಗ್ವಾದ ನಡೆಯುತ್ತಿವೆ. ಅದರಿಂದ ಜೀವನ ನಿರ್ವಹಣೆ ದುಸ್ತರವಾಗಿದೆ. ಈ ಹಿನ್ನಲೆ ಜಿಲ್ಲಾಡಳಿತ ತಕ್ಷಣ ಮಧ್ಯ ಪ್ರವೇಶಿಸಿ, ಸರ್ಕಾರಿ ಸಂಸ್ಥೆಯ ಬಂಕ್‌ಗಳಿಗೆ ಸಮರ್ಪಕ ಗ್ಯಾಸ್ ಸರಬರಾಜು ಖಚಿತಪಡಿಸಬೇಕು ಹಾಗು ಖಾಸಗಿ ಬಂಕ್‌ಗಳಲ್ಲಿ ದರ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಮನವಿ ಸಲ್ಲಿಸಿದರು.

# ನಾಗಮೋಹನ್‌ದಾಸ್ ವರದಿ ತಿರಸ್ಕರಿಸಲು ಆಗ್ರಹ

## ರಾಜ್ಯ ಬಲಗೈ ಸಮುದಾಯಗಳ ಒಕ್ಕೂಟದಿಂದ ಮಾ.25ರಂದು ಪ್ರತಿಭಟನೆ

• ಪ್ರಜೋದಯ ವರದಿ




**ಹಾಸನ:** ಒಳ ಮೀಸಲಾತಿ ಸಂಬಂಧ ಅವೈಜ್ಞಾನಿಕ, ಅಪೂರ್ಣ ಹಾಗು ಪಕ್ಷಪಾತದಿಂದ ಕೂಡಿರುವ ನ್ಯಾಯಮೂರ್ತಿ ನಾಗಮೋಹನ್‌ದಾಸ್ ಆಯೋಗದ ವರದಿಯನ್ನು ತಿರಸ್ಕರಿಸುವಂತೆ ಒತ್ತಾಯಿಸಿ ಮಾ.25 ರಂದು ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಬಲಗೈ ಸಮುದಾಯಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಮಲ್ಲಿಗೆವಾಳು ದ್ಯಾವಪ್ಪ ಅವರು ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿಭಟನೆಗೆ ಜಿಲ್ಲೆಯಿಂದ 15-20 ಸಾವಿರ ಜನ ಭಾಗಿಯಾಗಲಿದ್ದು, ರಾಜ್ಯದ ವಿವಿಧೆಡೆಗಳಿಂದ 3-5 ಲಕ್ಷ ಜನ ಭಾಗಿಯಾಗಲಿದ್ದಾರೆ. ಈ ಸಂಬಂಧ ಒಕ್ಕೂಟದ ರಾಜ್ಯ ಸಮಿತಿ ಮಾ.12 ರಂದು ಬೆಂಗಳೂರಿನ ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾ ಕಚೇರಿಯಲ್ಲಿ ಸಭೆ ನಡೆಸಿ ವಿಸ್ತೃತ ಚರ್ಚೆ ನಡೆಸಲಾಗಿದೆ ಎಂದು ಹೇಳಿದರು.

ಒಳಮೀಸಲಾತಿ ಸಂಬಂಧ ನ್ಯಾಯಾಲಯದ ತಡೆಯಾಜ್ಞೆ ಇದೆ. ಜೊತೆಗೆ, ರೋಸ್ಟರ್ ಬಿಂದುಗಳ ವಿಷಯದಲ್ಲಿ ಉಂಟಾಗಿರುವ ಗೊಂದಲ ಮತ್ತು ಶೇ.56ರ ಮೀಸಲಾತಿಗೆ ಕೇಂದ್ರ ಸರ್ಕಾರ ಒಪ್ಪಿಗೆ ನೀಡುವವರೆಗೆ ತಾತ್ಕಾಲಿಕವಾಗಿ ಒಳಮೀಸಲಾತಿ ರಹಿತ ಶೇ.15+3ರ ಮೀಸಲಾತಿ ಜಾರಿಗೊಳಿಸುವಂತೆ ಫೆ.27ರಂದು ರಾಜ್ಯ ಸರ್ಕಾರ ಹೊರಡಿಸಿರುವ ಆದೇಶ ಸ್ವಾಗತಾರ್ಹ ಎಂದರು.

ಪರಿಶಿಷ್ಟ ಜಾತಿಯ 101 ಜಾತಿಗಳಿಗೆ ಸಮಾನವಾಗಿ ಮೀಸಲಾತಿ ಹಂಚಿಕೆ ಆಗಬೇಕಾದರೆ ಮೀಸಲಾತಿ ಪ್ರಮಾಣ ಹೆಚ್ಚಿಸುವುದು ಅನಿವಾರ್ಯ. ಹೀಗಾಗಿ ಒಂದು ಜಾತಿಯ ಒತ್ತಡಕ್ಕೆ ಮಣಿದು ಶೇ.15+3ರ ಮೀಸಲಾತಿ ಯಲ್ಲೇ ಒಳಮೀಸಲಾತಿ ಜಾರಿಗೊಳಿಸಲು ಸರ್ಕಾರ ಮುಂದಾದರೆ, ಬಲಗೈ ಸಮುದಾಯಗಳ ತೀವ್ರ ಪ್ರತಿರೋಧ ಎದುರಿಸಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

ಒಕ್ಕೂಟವು ಸರ್ಕಾರದ ಮುಂದೆ ಹಲವು ಪ್ರಮುಖ ಬೇಡಿಕೆ ಮುಂದಿಟ್ಟಿದ್ದು, ನ್ಯಾ.ನಾಗಮೋಹನ್‌ದಾಸ್ ಆಯೋಗದ ವರದಿಯನ್ನು ತಕ್ಷಣ ತಿರಸ್ಕರಿಸಬೇಕು. ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಕೈಗೊಂಡಿರುವ ಕುಟುಂಬಗಳ ಸಮೀಕ್ಷೆಯ ವರದಿ ಲಭ್ಯವಾದ ನಂತರ ಅದನ್ನು ನಾಗಮೋಹನ್‌ದಾಸ್ ಆಯೋಗದ ಅಂಕಿ-ಅಂಶಗಳೊಂದಿಗೆ ಹೋಲಿಕೆ ಮಾಡಬೇಕು. ವ್ಯತ್ಯಾಸ ಕಂಡು ಬಂದಲ್ಲಿ ಪರಿಶಿಷ್ಟ ಜಾತಿಯ ಎಲ್ಲಾ ಕುಟುಂಬಗಳ ಮರು ಸಮೀಕ್ಷೆ ಕೈಗೊಳ್ಳಬೇಕು ಎಂದರು.

ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಮೂಲಕ ಜಾತಿ ಪ್ರಮಾಣ ಪತ್ರಗಳನ್ನುಪವರ್ಗ-ಎ.ಬಿ.ಸಿ. ಎಂದು ವರ್ಗೀಕರಿಸಿರುವುದನ್ನು ರದ್ದುಗೊಳಿಸಿ, ಮೂಲ ಜಾತಿ ಹೆಸರಿ ನೊಂದಿಗೆ ಪ್ರಮಾಣಪತ್ರ ನೀಡುವಂತೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿ ಸಿದರು.

ದಸಂಸ ಮುಖಂಡರಾದ ಈರೇಶ್ ಹಿರೇಹಳ್ಳಿ, ಕೃಷ್ಣದಾಸ್, ಹೆಚ್.ಕೆ. ಸಂದೇಶ್, ಕೃಷ್ಣ ಕುಮಾರ್, ಪುಟ್ಟರಾಜಪ್ಪ, ರಾಜಶೇಖರ್, ಎಂ. ಸೋಮಶೇಖರ್, ಶಿವಮ್ಮ, ಸಿ.ಎನ್. ದಾನಿ, ಪ್ರದೀಪ್, ಬಿ.ಸಿ.ರಾಜೇಶ್ ಇದ್ದರು.

# ಬೀದರ್‌ನಲ್ಲಿ ಏ.11, 12ರಂದು ಪತ್ರಕರ್ತರ ಸಮ್ಮೇಳನ

• ಪ್ರಜೋದಯ ವರದಿ




**ಹಾಸನ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 40ನೇ ರಾಜ್ಯ ಸಮ್ಮೇಳನ ಬೀದರ್‌ನಲ್ಲಿ ಏ.11 ಮತ್ತು 12 ರಂದು ನಡೆಯಲಿದೆ ಎಂದು ಕೆಯೂಡಬ್ಲ್ಯೂಜೆ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಅವರು ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೆ ಇದೇ ಮಾ.18-19 ರಂದು ಸಮ್ಮೇಳನ ನಿಗದಿ ಆಗಿತ್ತು. ಆದರೆ ಮುಖ್ಯಮಂತ್ರಿ ಅವರ ಅಲಭ್ಯತೆ ಹಿನ್ನಲೆ ಮುಂದೂಡ ಲಾಗಿದೆ. ಏ.11ರಂದು ಬೆಳಿಗ್ಗೆ ಮುಖ್ಯ ಮಂತ್ರಿ ಅವರು ಸಮ್ಮೇಳನಕ್ಕೆ ಚಾಲನೆ ನೀಡಲಿದ್ದಾರೆಂದು ಹೇಳಿದರು.


ಸಮ್ಮೇಳನ ಯಶಸ್ವಿಗೊಳಿಸಲು ಬೀದರ್ ಜಿಲ್ಲಾ ಸಂಘ ಎಲ್ಲಾ ರೀತಿಯ ಸಿದ್ಧತೆ ಮಾಡಿ ಕೊಂಡಿದೆ. ಸುಮಾರು 3-4 ಸಾವಿರ ಪತ್ರಕರ್ತರು ಎರಡು ದಿನಗಳ ಸಮ್ಮೇಳನದಲ್ಲಿ ಭಾಗಿಯಾಗಲಿದ್ದು, ಅದಕ್ಕಾಗಿ ವಸತಿ ಸೇರಿ ಎಲ್ಲಾ ರೀತಿಯ ವ್ಯವಸ್ಥೆ ಮಾಡಲಾಗಿದೆ. ಮೊದಲ ದಿನ ಹಿರಿಯ ಪತ್ರಕರ್ತರನ್ನೊಳಗೊಂಡಂತೆ ಹಲವಾರು ವಿಷಯ ತಜ್ಞರು ವಿವಿಧ ವಿಷಯಗಳ ಮೇಲೆ ಚರ್ಚಾಗೋಷ್ಠಿ ನಡೆಸಿಕೊಡಲಿದ್ದಾರೆ. ಹಾಗೆಯೇ ಪತ್ರಕರ್ತರ ಹತ್ತು ಹಲವು ಸಮಸ್ಯೆ ಗಳು, ಸವಾಲುಗಳು, ಈಗಿನ ಎಐ ತಂತ್ರಜ್ಞಾನವನ್ನು ವೃತ್ತಿಪರ ಅನುಕೂಲಕ್ಕೆ ತಕ್ಕಂತೆ ಹೇಗೆ ಬಳಸಿಕೊಳ್ಳಬೇಕು ಎಂಬುದರ ಬಗ್ಗೆಯೂ ಚಿಂತನ-ಮಂಥನ ನಡೆಯಲಿದೆಂದು ತಿಳಿಸಿದರು.

ಏ.12 ರಂದು ಕೆಯೂಡಬ್ಲ್ಯೂಜೆ ಸರ್ವ ಸದಸ್ಯರ ಸಾಮಾನ್ಯ ಸಭೆ ನಡೆಯಲಿದೆ. ಎಲ್ಲಾ ಪತ್ರಕರ್ತರು ರಾಜ್ಯದ 31 ಜಿಲ್ಲೆ ಹಾಗು ಎಲ್ಲಾ ತಾಲ್ಲೂಕುಗಳಿಂದ ಭಾಗಿಯಾಗಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ ಅವರು, ಬೆಂಗಳೂರಿನಿಂದ ರೈಲುಮತ್ತು ವಿಮಾನ ಸೌಲಭ್ಯ ಇದ್ದು ಅಗತ್ಯಕ್ಕೆ ತಕ್ಕಂತೆ ವ್ಯವಸ್ಥೆ ಮಾಡಿಕೊಳ್ಳುವಂತೆ ಸಲಹೆ ನೀಡಿದರು.

ಜಿಲ್ಲಾಧ್ಯಕ್ಷರಾದ ಜೆ.ಆರ್. ಕೆಂಚೇಗೌಡ, ಉಪಾಧ್ಯಕ್ಷರಾದ ಎನ್. ನಂಜುಂಡೇಗೌಡ, ಜಿ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಕೆ.ಜಿ. ಸುರೇಶ್, ಖಜಾಂಚಿ ಪ್ರಕಾಶ್ ಬೆಳವಾಡಿ ಇದ್ದರು.









ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019